# ಕನ್ನಡ ಪೋಸ್ಟ್

KANNADA POST

ಇದು ಸುದ್ದಿ ವಿಳಾಸ

ಸಂಪಾದಕ : ಮಂಜು ಬನವಾಸೆ

ಕನ್ನಡ ದಿನಪತ್ರಿಕೆ

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.02 | Issue. 152 | Pages. 2 | Date: 23-05-2026, SATURDAY | RNI NO: KARKAN/2024/89601 | Kannada Daily

ಸಂಪುಟ : 02 - ಸಂಚಿಕೆ : 152 - ಪುಟಗಳು : 2 | 23-05-2026 ಶನಿವಾರ | Ph: 8762954248 | ದರ : ₹1


# ಬಿಜಿಎಸ್‌ಕೆ ಲೇಔಟ್ ನಿವೇಶನ ಹಂಚಿಕೆ ದಿನಾಂಕ ನಿಗದಿ

## ಜೂ.18 ರಂದು ಇ-ಲಾಟರಿ ಪ್ರಕ್ರಿಯೆ | ಹುಡಾ ಅಧ್ಯಕ್ಷ ಪಟೇಲ್ ಶಿವಪ್ಪ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಹಾಸನ ನಗರಾಭಿವೃದ್ಧಿ ಪ್ರಾಧಿಕಾರ (ಹುಡಾ)ದ ವತಿಯಿಂದ ಬೂವನಹಳ್ಳಿ, ಗೇಕರವಳ್ಳಿ, ಸಮುದ್ರವಳ್ಳಿ ಮತ್ತು ಕೆಂಚಟ್ಟಹಳ್ಳಿ (ಬಿಜಿಎಸ್‌ಕೆ) ವ್ಯಾಪ್ತಿಯಲ್ಲಿ ನೂತನವಾಗಿ ನಿರ್ಮಾಣ ಮಾಡಿರುವ ಹೈಟೆಕ್ ಬಡಾವಣೆಯಲ್ಲಿ ಸಿದ್ಧಪಡಿಸಿರುವ ನಿವೇಶನಗಳಲ್ಲಿ ಜೂ.18 ರಂದು ಹಂಚಿಕೆ ಮಾಡಲಾಗುವುದು ಎಂದು ಹುಡಾ ಅಧ್ಯಕ್ಷ ಪಟೇಲ್ ಶಿವಣ್ಣ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಶುಕ್ರವಾರ ಮಾತನಾಡಿ, 1836 ರೈತರು ನೀಡಿರುವ 1145 ಎಕರೆ 32 ಗುಂಟೆ ಭೂ ಪ್ರದೇಶದಲ್ಲಿ 890 ಕೋಟಿ ರೂ. ವೆಚ್ಚದಲ್ಲಿ ರಾಜ್ಯದಲ್ಲೇ ಹೈಟೆಕ್ ಮತ್ತು ಸುಂದರವಾದ ಬಡಾವಣೆ ನಿರ್ಮಾಣ ಮಾಡಲಾಗಿದ್ದು, ಈಗಾಗಲೇ ಶೇ.80 ರಷ್ಟು ಕೆಲಸ ಮುಗಿಸಿದೆ. ಇಲ್ಲಿ ಒಟ್ಟು 13,909 ನಿವೇಶನ ಹಂಚಿಕೆಗೆ ಲಭ್ಯವಿದ್ದು, ಇವುಗಳನ್ನು ಇ ಲಾಟರಿ ಮೂಲಕ ಹಂಚಿಕೆ ಮಾಡಲಾಗುವುದು ಎಂದು ತಿಳಿಸಿದರು.

ರೈತರು ಹಾಗೂ ಪ್ರಾಧಿಕಾರದ ಸಹಭಾಗಿತ್ವದಲ್ಲಿ ಶೇ.50:50 ಅನುಪಾತದಲ್ಲಿ ಯೋಜನೆ ಜಾರಿಗೊಳಿಸಲಾಗುತ್ತಿದೆ. ಇದು ರಾಜ್ಯದಲ್ಲೇ ಮಾದರಿ ಯೋಜನೆಯಾಗಿ ರೂಪುಗೊಂಡಿದೆ. ಸಮರೋಪಾದಿಯಲ್ಲಿ ಕೆಲಸ ಆಗಿದೆ.

ಅಧಿಕಾರಿಗಳು ಜವಾಬ್ದಾರಿಯಿಂದ ಕೆಲಸ ಮಾಡಿದ್ದಾರೆ. ಎಸ್‌ಎಂಕೆ ನಗರದಲ್ಲಿ ಸ್ಮಶಾನ ಇಲ್ಲ ಎಂಬ ಆರೋಪ ಕೇಳಿ ಬಂದಿತ್ತು. ಬೂವನಹಳ್ಳಿ ಬಳಿ 3 ಎಕರೆ ಪ್ರದೇಶದಲ್ಲಿ ಹೈಟೆಕ್ ಸ್ಮಶಾನ ಸಹ ನಿರ್ಮಿಸಲಾಗಿದೆ. 80,40,30 ಅಡಿ ರಸ್ತೆ ನಿರ್ಮಿಸಲಾಗಿದೆ. ಕುಡಿಯುವ ನೀರಿನ ಯೋಜನೆಗೆ ರೈಲ್ವೆ ಇಲಾಖೆ ಒಂದು ಅನುಮತಿ ಸಿಕ್ಕಿದೆ, ಮತ್ತೊಂದು ಅನುಮತಿ ಹಂತದಲ್ಲಿದೆ ಎಂದು ವಿವರಿಸಿದರು.



### ಮೂಲಸೌಕರ್ಯಕ್ಕೆ ಆದ್ಯತೆ

220 ಮತ್ತು 63 ಕೆವಿ ವಿದ್ಯುತ್ ಸ್ಟೇಷನ್ ನಿರ್ಮಾಣಕ್ಕೆ ಟೆಂಡರ್ ಆಗಿದೆ. ಒಂದು ವರ್ಷದಲ್ಲಿ ಕಾಮಗಾರಿ ಮುಗಿಸಲಾಗುವುದು.

ರಸ್ತೆ, ಕುಡಿಯುವ ನೀರು, ಒಳಚರಂಡಿ, ಮಳೆ ನೀರು ಹರಿವು ವ್ಯವಸ್ಥೆ, ವಿದ್ಯುತ್, ಉದ್ಯಾನವನ, ನಾಗರಿಕ ಸೌಲಭ್ಯಗಳು ಸೇರಿದಂತೆ ಸಮಗ್ರ ಮೂಲಸೌಕರ್ಯಗಳನ್ನು ಕಲ್ಪಿಸಲಾಗುತ್ತಿದೆ. ಬಡಾವಣೆಯಲ್ಲಿ

ಒಟ್ಟು 13,909 ನಿವೇಶನಗಳು ಹಂಚಿಕೆಗೆ ಲಭ್ಯವಿದ್ದು, ಈ ಪೈಕಿ ರೈತರಿಗೆ 7200, ಅರ್ಜಿ ಹಾಕಿರುವವರಿಗೆ 5935, ಮೂಲೆ/ವಾಣಿಜ್ಯ ನಿವೇಶನಗಳು 1265 ಇದ್ದು, ಇ ಹರಾಜು ಮಾಡಲಾಗುವುದು ಎಂದರು.

### ಕಲಾಭವನದಲ್ಲಿ ಸಮಾರಂಭ

ನಿವೇಶನಕ್ಕಾಗಿ 27,821 ಮಂದಿ ಅರ್ಜಿ ಹಾಕಿದ್ದಾರೆ.

### ಯಾವ ಅಳತೆಯ ಎಷ್ಟು ನಿವೇಶನ ಲಭ್ಯ

| | |
|---|---|
| 20★30 3131 | 30★50 3744 |
| 30★40 4414 | 40★60 1174 |
| 30★50 551 | 50★80 894 |

ಇವರಲ್ಲಿ ಒಂದೇ ಕುಟುಂಬದ ಹಲವರು ಅರ್ಜಿ ಹಾಕಿದ್ದಾರೆ. ನಿವೇಶನ ಹಂಚಿಕೆ ವೇಳೆ ಜಿಲ್ಲಾ ಉಸ್ತುವಾರಿ ಸಚಿವರು, ನಗರಾಭಿವೃದ್ಧಿ ಸಚಿವರು ಹಾಗೂ ಜಿಲ್ಲೆಯ ಎಲ್ಲ ಜನಪ್ರತಿನಿಧಿಗಳು ಹಾಜರಿರುವರು. ಅಂದು ನಗರದ ಕಲಾಭವನದಲ್ಲಿ ಕಾರ್ಯಕ್ರಮ ಆಯೋಜನೆ ಮಾಡಿ ಸರ್ಕಾರದ ನಿಯಮಾವಳಿ ಹಾಗೂ ಮೀಸಲಾತಿ ಅನ್ವಯ ಪಾರದರ್ಶಕವಾಗಿ ಸೈಟ್ ಹಂಚಿಕೆ ಮಾಡಲಾಗುವುದು ಎಂದು ವಿವರಸಿದರು.

> ಬೆಂಗಳೂರು, ಮಂಗಳೂರು, ಚಿಕ್ಕಮಗಳೂರು, ತುಮಕೂರು, ಮೈಸೂರು ಮಧ್ಯೆ ಇರುವ ಹಾಸನ ನಗರದ ಭವಿಷ್ಯದ ವಿಸ್ತರಣೆ ಗಮನದಲ್ಲಿಟ್ಟುಕೊಂಡು ಈ ಯೋಜನೆ ರೂಪಿಸಲಾಗಿದ್ದು, ಮುಂದಿನ ದಿನಗಳಲ್ಲಿ ನಗರದ ಪ್ರಮುಖ ವಸತಿ ಬಡಾವಣೆಯಾಗಿ ಬೆಳೆಯಲಿದೆ.
>
> – ಪಟೇಲ್ ಶಿವಪ್ಪ, ಹುಡಾ ಅಧ್ಯಕ್ಷ

ವರ್ಗವಾರು ಹಂಚಿಕೆ: ಸಾರ್ವಜನಿಕರಿಗೆ ಹಂಚಿಕೆ ಮಾಡಲು ಲಭ್ಯವಾಗುವ ಒಟ್ಟು 5935 ನಿವೇಶನಗಳನ್ನು ವರ್ಗವಾರು ನಿವೇಶನ ಮಾಡಲು ಕ್ರಮವಹಿಸಲಾಗಿದೆ. ಅಂತೆಯೇ ಹಿಂದುಳಿದ ಪಂಗಡಗಳು ಪ್ರವರ್ಗ-1(ಬಿಟಿ) ಶೇ.2 ರಷ್ಟು, ಅನುಸೂಚಿತ ಬುಡಕಟ್ಟು(ಎಸ್‌ಟಿ) ಶೇ.6.55, ಅನುಸೂಚಿತ ಜಾತಿ(ಎಸ್‌ಸಿ) ಶೇ.16.2, ಮಾಜಿ ಸೈನಿಕರು ಅಥವಾ ಮೃತ ಸೈನಿಕರ ಕುಟುಂಬದ ಸದಸ್ಯರು ಮತ್ತು ಕೇಂದ್ರ ಶಸ್ತ್ರಪಡೆಯ ಸದಸ್ಯರು ಶೇ.7.75,ರಾಜ್ಯ ಸರ್ಕಾರ, ನಿಗಮ ಸಾರ್ವಜನಿಕ ವಲಯ ಉದ್ದಿಮೆಗಳು ಮತ್ತು ಶಾಸನ ಪದತ್ತ ಪ್ರಾಧಿಕಾರಿಗಳ ನೌಕರರು ಶೇ.7.50, ಕೇಂದ್ರ ಸರ್ಕಾರದ ಸಾರ್ವಜನಿಕ ವಲಯ ಉದ್ದಿಮೆಗಳು/ನಿಗಮ ಮತ್ತು ಶಾಸನ ಪ್ರದತ್ತ ಪ್ರಾಧಿಕಾರಗಳ ನೌಕರರು ಶೇ.5, ಸಾರ್ವಜನಿಕರು ಶೇ.50, ಕಲೆ,ವಿಜ್ಞಾನ,ಕ್ರೀಡೆ, ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದವರಿಗೆ ಶೇ.3 ಮತ್ತು ಅಂಗವಿಕಲರಿಗೆ ಶೇ.2 ರಷ್ಟು ನಿವೇಶನ ಹಂಚಿಕೆ ಮಾಡಲು ನಿರ್ಧರಿಸಲಾಗಿದೆ ಎಂದರು.

ಸುದ್ದಿಗೋಷ್ಠಿಯಲ್ಲಿ ಹುಡಾ ಆಯುಕ್ತ ರಮೇಶ್, ಶಿವಕುಮಾರ್ ಇದ್ದರು.

# ಮೇ 25ಕ್ಕೆ ದೇಶಭಕ್ತಿ ಗೀತೆ ಸಮೂಹ ಗಾಯನ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**


ಚನ್ನರಾಯಪಟ್ಟಣ: ದೇಶದ ಬಗ್ಗೆ ಅಭಿಮಾನ, ನಾಡಿನ ಸಂಸ್ಕೃತಿಯ ಬಿಂಬ ಹಾಗೂ ಯುವ ಜನತೆಯಲ್ಲಿ ದೇಶ ಪ್ರೇಮವನ್ನು ಜಾಗೃತಗೊಳಿಸುವ ಉದ್ದೇಶದಿಂದ ದೀಕ್ಷಿತ್ ಪ್ರತಿಷ್ಠಾನಮ್ ವತಿಯಿಂದ ಮೇ 25 ರಂದು ದೇಶಭಕ್ತಿ ಗೀತೆಗಳ ಸಮೂಹ ಗಾಯನ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ದೀಕ್ಷಿತ್ ಪ್ರತಿಷ್ಠಾನದ ಅಧ್ಯಕ್ಷ ಡಾ.ಎಂ.ಎಸ್.ವಿಶ್ವನಾಥ್ ದೀಕ್ಷಿತ್ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಶುಕ್ರವಾರ ಮಾತನಾಡಿ,ಯುವ ಪೀಳಿಗೆಯಲ್ಲಿ ನಾಡು-ನುಡಿ ಹಾಗೂ ದೇಶದ ಬಗ್ಗೆ ಅಭಿಮಾನ ಮೂಡಿಸುವುದು. ದೇಶಪ್ರೇಮ ಮತ್ತು ಸಾಂಸ್ಕೃತಿಕ ಮೌಲ್ಯಗಳನ್ನು ಬೆಳೆಸುವ ಉದ್ದೇಶದಿಂದ ಈ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದರು.

ಪೋಷಕರು ತಮ್ಮ ಮಕ್ಕಳನ್ನು ಈ ಕಾರ್ಯಕ್ರಮಕ್ಕೆ ಕಳುಹಿಸುವ ಮೂಲಕ ಪ್ರೋತ್ಸಾಹಿಸಬೇಕು. ಚನ್ನರಾಯಪಟ್ಟಣದ ಕಲಾ ಪರಿವಾರದ ನೂರು ಜನ ಕಲಾವಿದರಿಂದ ಸಮೂಹ ಗಾಯನ ಕಾರ್ಯಕ್ರಮ ಆಯೋಜಿಸಲಾಗಿದೆ. ಕಾರ್ಯಕ್ರಮದ ದಿವ್ಯ ಉಪಸ್ಥಿತಿಯನ್ನು ರಾಷ್ಟ್ರೀಯ ಸ್ವಯಂಸೇವಕ ಸಂಘದ ಹಿರಿಯ ಪ್ರಚಾರಕ ಸೀತಾರಾಮ್ ಕೆದಿಲಾಯರು ವಹಿಸಲಿದ್ದು, ಬೆಂಗಳೂರಿನ ವೇದ ವಿದ್ವಾಂಸ ವಿರೂಪಾಕ್ಷ ದೀಕ್ಷಿತ್ ಪ್ರಾಸ್ತಾವಿಕ ನುಡಿಗಳನ್ನಾಡುವರು ಎಂದು ತಿಳಿಸಿದರು.

ಅಧ್ಯಕ್ಷತೆಯನ್ನು ಪ್ರತಿಷ್ಠಾನಮ್‌ನ ಗೌರವಾಧ್ಯಕ್ಷ ಲೋಕೇಶ್ ಹೊನ್ನಾವರ ವಹಿಸಲಿದ್ದು, ವಿಶೇಷ ಆಹ್ವಾನಿತರಾಗಿ ರೈಲ್ವೆ ಇಲಾಖೆಯ ನಿವೃತ್ತ ಉಪಯೋಜನ ವ್ಯವಸ್ಥಾಪಕ ಬಾಲಸುಬ್ರಹ್ಮಣ್ಯಂ ಆಗಮಿಸಲಿದ್ದು, ಕಾರ್ಯಕ್ರಮವು ನವೋದಯ ಕಾಲೇಜು ಆವರಣದಲ್ಲಿ ಸಂಜೆ 5 ಗಂಟೆಗೆ ಆರಂಭವಾಗಲಿದೆ. ದೇಶಾಭಿಮಾನಿಗಳು ಅತಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಮನವಿ ಮಾಡಿದರು.

# ಕಾಫಿ ಬೆಳೆಗಾರರ ಸಂಘದ ಸಂಘಟನಾ ಕಾರ್ಯದರ್ಶಿಯಾಗಿ ಮಂಜುನಾಥ್



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಕಲಗೂಡು: ತಾಲೂಕಿನ ಮದಲಾಪುರ ಗ್ರಾಮದ ಕಾಫಿ ಬೆಳೆಗಾರ ಎಂ.ಆರ್. ಮಂಜುನಾಥ್ ಅವರನ್ನು ಜಿಲ್ಲಾ ಕಾಫಿ ಬೆಳೆಗಾರರ ಸಂಘದ ಸಂಘಟನಾ ಕಾರ್ಯದರ್ಶಿಯಾಗಿ ನೇಮಕ ಮಾಡಲಾಗಿದೆ.

ತಾಲೂಕು ಕಾಫಿ ಬೆಳೆಗಾರರ ಸಂಘದ ಸದಸ್ಯರಾಗಿದ್ದ ಮಂಜುನಾಥ್ ಅವರನ್ನು ಗುರುವಾರ ಸಕಲೇಶಪುರದಲ್ಲಿ ನಡೆದ ಕಾಫಿ ಬೆಳೆಗಾರರ ಸಮಾವೇಶದಲ್ಲಿ ಜಿಲ್ಲಾ ನಿರ್ದೇಶಕರಾಗಿ ಆಯ್ಕೆ ಮಾಡಿ ಸಂಜೆ ನಡೆದ ಪದಾಧಿಕಾರಿಗಳ ಪದಗ್ರಹಣ ಸಮಾರಂಭಲ್ಲಿ ಸಂಘಟನಾ ಕಾರ್ಯದರ್ಶಿಯಾಗಿ ಅಧಿಕಾರ ವಹಿಸಲಾಯಿತು.

ಜಿಲ್ಲಾ ಸಂಘದ ಅಧ್ಯಕ್ಷ ಮಂಜುನಾಥಶೆಟ್ಟಿ, ಉಪಾಧ್ಯಕ್ಷ ಸಚಿನ್, ಕಾರ್ಯದರ್ಶಿ ಪುಟ್ಟರಾಜು, ಅರಕಲಗೂಡು ತಾಲೂಕು ಸಂಘದ ಅಧ್ಯಕ್ಷ ಬಸವರಾಜು, ಕಾರ್ಯದರ್ಶಿ ರವಿಕುಮಾ,ರ್ ಜಿಲ್ಲಾ ನಿರ್ದೇಶಕರಾದ ಬಿ.ಜೆ. ಕಾಂತರಾಜು, ಅರುಣಕುಮಾರ್, ನಾರಾಯಣ, ನಾಗರಾಜು ಹಾಗೂ ಜಿಲ್ಲಾ ಘಟಕದ ಪದಾಧಿಕಾರಿಗಳು ಇದ್ದರು.

# ಆಲೂರಿನಲ್ಲಿ ಸಿಲಿಂಡರ್ ಕೊರತೆ: ಶಾಸಕರ ತುರ್ತು ಸಭೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಆಲೂರು: ಅಡುಗೆ ಅನಿಲ ಸಮರ್ಪಕವಾಗಿ ಪೂರೈಕೆಯಾಗುತ್ತಿದ್ದು, ಗ್ರಾಹಕರು ಆತಂಕಪಡುವುದು ಬೇಡ. ಬುಕ್ ಮಾಡಿದ ಎಲ್ಲರಿಗೂ ವಿತರಿಸಲಾಗುವುದು ಎಂದು ಶಾಸಕ ಸಿಮೆಂಟ್ ಮಂಜು ಭರವಸೆ ನೀಡಿದರು.

ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ಶುಕ್ರವಾರ ನಡೆದ ಗ್ಯಾಸ್ ವಿತರಣೆಯಲ್ಲಿ ಗ್ರಾಹಕರಿಗೆ ಆಗುತ್ತಿರುವ ತೊಂದರೆ ಕುರಿತು ಗ್ಯಾಸ್ ಏಜೆನ್ಸಿ ಹಾಗೂ ಅಧಿಕಾರಿಗಳೊಂದಿಗೆ ನಡೆದ ತುರ್ತು ಸಭೆಯ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಗ್ರಾಹಕರು ಗ್ಯಾಸ್ ಬುಕ್ ಮಾಡಿದ 45 ದಿನದಲ್ಲಿ ತಪ್ಪದೇ ಗ್ಯಾಸ್ ವಿತರಣೆ ಮಾಡಲಾಗುವುದು. ಗ್ರಾಹಕರು ಗ್ಯಾಸ್ ಗೋಡೌನ್/ಕಚೇರಿಯಲ್ಲಿ ಕಡ್ಡಾಯವಾಗಿ ಒಟಿಪಿ ನಂಬರ್ ಕೊಟ್ಟು ತಮ್ಮ ಸಿಲಿಂಡರ್ ಪಡೆದುಕೊಳ್ಳಬೇಕು. ತಮ್ಮ ಸರದಿ ಬರುವವರೆಗೂ ಕಚೇರಿಗೆ ಅಲೆಯುವುದು ಬೇಡವೆಂದರು.

ಪ್ರತಿಯೊಬ್ಬ ಗ್ರಾಹಕರಿಗೂ ಗ್ಯಾಸ್ ವಿತರಣೆಯನ್ನು ತಪ್ಪದೆ ಮಾಡಲಾಗುವುದು. ಈ ಹಿಂದೆ ಇದ್ದಂತೆ ತಕ್ಷಣ ಗ್ಯಾಸ್ ದೊರಕುವುದಿಲ್ಲ. ಬೇಡಿಕೆಗೆ ಅನುಗುಣವಾಗಿ ನಿಯಮಾನುಸಾರ ಸಿಲಿಂಡರ್ ವಿತರಣೆ ಮಾಡಲಾಗುವುದು. ಹಲವು ಗ್ರಾಹಕರ ಒಟಿಪಿ ಪಡೆದು ಕಾಳಸಂತೆಯಲ್ಲಿ ಗ್ಯಾಸ್ ಮಾರಾಟವಾಗಿರುವುದು ಗಮನಕ್ಕೆ ಬಂದಿದೆ. ಈ ಬಗ್ಗೆ ತನಿಖೆ ನಡೆಸಲು ಅಧಿಕಾರಿಗಳಿಗೆ ಸೂಚಿಸಿದ್ದೇನೆ. ಸಮಸ್ಯೆ ನಿಧಾನವಾಗಿ ಪರಿಹಾರವಾಗುತ್ತದೆ. ಪಾಶ್ಚಿಮಾತ್ಯ ದೇಶದಲ್ಲಿ ಯುದ್ಧ ಪ್ರಾರಂಭವಾದ ನಂತರ ಸಿಲಿಂಡರ್ ವಿತರಣೆಯಲ್ಲಿ ವ್ಯತ್ಯಾಸವಾಗಿರುವುದು ನಿಜ. ಯುದ್ಧ ಪ್ರಾರಂಭವಾಗುವ ಮೊದಲು ಸಕಾಲಕ್ಕೆ ಗ್ಯಾಸ್ ದೊರಕುತ್ತಿತ್ತು. ಈಗ ಸಿಲಿಂಡರ್ ಪ್ರಮಾಣ ಕಡಿಮೆ ಬರುತ್ತಿರುವುದರಿಂದ ಬುಕ್ ಮಾಡಿದ 45 ದಿನಗಳಲ್ಲಿ ಸಿಲಿಂಡರ್ ವಿತರಣೆ ಮಾಡಲಾಗುವುದು.



ಗ್ಯಾಸ್ ಏಜೆನ್ಸಿ ಕಚೇರಿಯಲ್ಲಿ ಪ್ರತಿದಿನ ಸಿಲಿಂಡರ್ ಪಡೆಯುವವರ ಹೆಸರು, ಮೊಬೈಲ್ ಸಂಖ್ಯೆ ನಮೂದಿಸಿದ ಪಟ್ಟಿಯನ್ನು ತಪ್ಪದೇ ಪ್ರದರ್ಶಿಸಬೇಕು. ಈವರೆಗೆ ಆಗಿರುವ ಲೋಪವನ್ನು ಸರಿಪಡಿಸಿಕೊಂಡು ನಿಯಮಾನುಸಾರ ಸಿಲಿಂಡರ್‌ಗಳನ್ನು ವಿತರಣೆ ಮಾಡಬೇಕು. ಭವಿಷ್ಯದಲ್ಲಿ ಸಮಸ್ಯೆ ಎದುರಾಗದಂತೆ ಕ್ರಮ ವಹಿಸಬೇಕು. ಸಮಸ್ಯೆ ಬಗೆಹರಿದ ನಂತರ ಮನೆಗಳ ಬಳಿಗೆ ಸಿಲಿಂಡರ್ ವಿತರಿಸಲಾಗುವುದು ಎಂದು ಸೂಚಿಸಿದರು.

ಸಭೆಯಲ್ಲಿ ಉಪವಿಭಾಗಾಧಿಕಾರಿ ಹುಲ್ಲುಮನಿ ತಮ್ಮಣ್ಣನವರ್, ತಹಶೀಲ್ದಾರ್ ಮಲ್ಲಿಕಾರ್ಜುನ, ಆಹಾರ ಇಲಾಖೆ ಜಂಟಿ ನಿರ್ದೇಶಕ ಅರುಣ್‌ಕುಮಾರ್ ಸಂಗಾವಿ, ಗ್ಯಾಸ್ ಏಜೆನ್ಸಿಯ ಮಂಜುನಾಥ್, ತಾ.ಪಂ.ಕಾರ್ಯ ನಿರ್ವಹಣಾಧಿಕಾರಿ ಸುಬ್ರಹ್ಮಣ್ಯ, ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಮಂಜುನಾಥ್ ಮತ್ತಿತರರಿದ್ದರು.

### ಗ್ಯಾಸ್ ಏಜೆನ್ಸಿ ಎದುರು ನೂಕುನುಗ್ಗಲು

ಪಶ್ಚಿಮ ದೇಶಗಳಲ್ಲಿ ನಡೆಯುತ್ತಿರುವ ಸಂಘರ್ಷದಿಂದ ಸಿಲಿಂಡರ್ ಗ್ಯಾಸ್ ಪೂರೈಕೆಯಲ್ಲಿ ಉಂಟಾಗಿದ್ದ ವ್ಯತ್ಯಯ ತಾಲ್ಲೂಕಿನಲ್ಲಿ ಈಗಲೂ ಮುಂದುವರಿದಿದ್ದು ಸಾರ್ವಜನಿಕರು ಹೈರಾಣಾಗಿದ್ದಾರೆ.

ಬುಕ್ಕಿಂಗ್ ಮಾಡಿ ಎರಡು ತಿಂಗಳಾದರೂ ಸಿಲಿಂಡರ್ ತಲುಪದ ಹಿನ್ನೆಲೆಯಲ್ಲಿ ಶುಕ್ರವಾರ ಪಟ್ಟಣದ ಬಿಕ್ಕೋಡು ರಸ್ತೆಯಲ್ಲಿರುವ ಭಾರತ್ ಗ್ಯಾಸ್ ಏಜೆನ್ಸಿ ಎದುರು ಗ್ರಾಹಕರು ಜಮಾಯಿಸಿ ಆಕ್ರೋಶ ವ್ಯಕ್ತಪಡಿಸಿದರು.

ಜಿಲ್ಲೆಯ ಯಾವ ತಾಲ್ಲೂಕಿನಲ್ಲೂ ಉಂಟಾಗದ ಸಮಸ್ಯೆ ಆಲೂರಿ ನಲ್ಲಿ ಮಾತ್ರ ಕಾಣಿಸಿಕೊಳ್ಳುತ್ತಿದೆ. ಗ್ಯಾಸ್ ಏಜೆನ್ಸಿಯ ಸಿಬ್ಬಂದಿ, ಡಿಲೆವರಿ ಬಾಯ್‌ಗಳು ಶಾಮೀಲಾಗಿ ಕಾಳಸಂತೆಯಲ್ಲಿ ಸಿಲಿಂಡರ್ ಮಾರಾಟ ಮಾಡುತ್ತಿದ್ದಾರೆ. ಎರಡು ತಿಂಗಳ ಹಿಂದೆ ಬುಕ್ಕಿಂಗ್ ಆಗಿದ್ದ ಸಿಲಿಂಡರ್ ವಾರಸುದಾರರಿಗೆ ಗೊತ್ತಾಗದಂತೆ ಮಾರಾಟವಾಗಿದೆ. ಪ್ರತಿ ಸಿಲಿಂಡರ್ ಅನ್ನು 2,500 ರೂ.ನಂತೆ ಮಾರಾಟ ಮಾಡುತ್ತಿದ್ದಾರೆ. ಇಲ್ಲಿನ ಅಧಿಕಾರಿ ಹಾಗು ಸಿಬ್ಬಂದಿ ಅಕ್ರಮದಲ್ಲಿ ಪಾಲುದಾರರಾಗಿದ್ದಾರೆಂದು ಆಕ್ರೋಶ ವ್ಯಕ್ತಪಡಿಸಿದರು.

# ಪ್ರತ್ಯೇಕ ಅಪಘಾತ: ಇಬ್ಬರು ಸಾವು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಕೆಎಸ್‌ಆರ್‌ಟಿಸಿ ಬಸ್ ಡಿಕ್ಕಿಯಾಗಿ ವಿದ್ಯಾರ್ಥಿ ಮೃತಪಟ್ಟಿರುವ ಘಟನೆ ಬಿಎಂ ರಸ್ತೆಯಲ್ಲಿ ಗುರುವಾರ ನಡೆದಿದೆ.

ಬಿ.ಕಾಟಿಹಳ್ಳಿಯ ಲೋಕೇಶ ಅವರ ಪುತ್ರ ಗೌತಮ್ (19) ಮೃತ ದುರ್ದೈವಿ. ಬಿ.ಕಾಟೀಹಳ್ಳಿಯಲ್ಲಿರುವ ಸಂತ ಜೋಸೆಫ್ ಕಾಲೇಜಿನಲ್ಲಿ ವ್ಯಾಸಂಗ ಮಾಡುತ್ತಿದ್ದ ಗೌತಮ್ ಎಲೆಕ್ಟ್ರಿಕಲ್ ಬೈಕ್‌ನಲ್ಲಿ ಕಾಲೇಜಿಗೆ ಹೋಗುತ್ತಿದ್ದಾಗ ಡೇರಿ ವೃತ್ತದ ರೇಷ್ಮೆಗೂಡಿನ ಮಾರುಕಟ್ಟೆ ಸಮೀಪ ಹಿಂದಿನಿಂದ ವೇಗವಾಗಿ ಬಂದ ಕೆಎಸ್‌ಆರ್‌ಟಿಸಿ ಬಸ್ ಡಿಕ್ಕಿಯಾಗಿದೆ. ಗಂಭೀರ ಗಾಯಗೊಂಡಿದ್ದ ಯುವಕನನ್ನು ಆಸ್ಪತ್ರೆಗೆ ದಾಖಲಿಸಲಾಯಿತಾದರೂ ಚಿಕಿತ್ಸೆ ಫಲಿಸದೆ ಮೃತಪಟ್ಟಿದ್ದಾನೆ. ಸಂಚಾರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಮತ್ತೊಂದು ಪ್ರಕರಣದಲ್ಲಿ ಬೈಕ್‌ಗಳ ಮುಖಾಮುಖಿ ಡಿಕ್ಕಿಯಲ್ಲಿ ಸೆಸ್ಕಾಂ ಉದ್ಯೋಗಿ ಮೃತಪಟ್ಟಿರುವ ಘಟನೆ ತಾಲ್ಲೂಕಿನ ಬೆಂಡೆಕೆರೆ-ಕುರುವಂಕ ರಸ್ತೆಯಲ್ಲಿ ನಡೆದಿದೆ. ಬಾಣಾವರ ಹೋಬಳಿ ಚಿಕ್ಕಮ್ಮನಹಳ್ಳಿ ಗ್ರಾಮದ ರಮೇಶ (30) ಮೃತರು.

ಚನ್ನರಾಯಪಟ್ಟಣದ ಕೆಇಬಿ ಕಚೇರಿಯಲ್ಲಿ ಕಿರಿಯ ಸಹಾಯಕನಾಗಿ ಕೆಲಸ ಮಾಡಿಕೊಂಡಿದ್ದ ರಮೇಶ ಅವರು ಗುರುವಾರ ಕೆಲಸ ಮುಗಿಸಿ ಬೈಕ್‌ನಲ್ಲಿ ಊರಿಗೆ ಬರುತ್ತಿದ್ದಾಗ ಎದುರುಗಡೆಯಿಂದ ವೇಗವಾಗಿ ಬಂದ ಬೈಕ್ ಡಿಕ್ಕಿಯಾಗಿದೆ. ತೀವ್ರ ರಕ್ತಸ್ರಾವ ಹಾಗೂ ತಲೆಗೆ ಬಲವಾದ ಪೆಟ್ಟು ಬಿದ್ದಿದ್ದರಿಂದ ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಬಾಣಾವರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಸಕಲೇಶಪುರದಲ್ಲಿ ಲೋ ನವೀನ ಸಿನಿಮಾ ಪ್ರಚಾರ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ಕನ್ನಡ ಚಿತ್ರರಂಗದ ಯುವ ನಟ ಹಾಗೂ ಸಂಗೀತ ನಿರ್ದೇಶಕ ನವೀನ್ ಸಜ್ಜು ಅಭಿನಯದ ಲೋ ನವೀನ ಚಿತ್ರದ ಪ್ರಚಾರ ಕಾರ್ಯಕ್ರಮ ಪಟ್ಟಣದ ತೇಜಸ್ವಿ ಚಿತ್ರಮಂದಿರದಲ್ಲಿ ಸಂಭ್ರಮದಿಂದ ನಡೆಯಿತು.

ಚಿತ್ರದ ಪ್ರಚಾರಕ್ಕಾಗಿ ಆಗಮಿಸಿದ್ದ ನಟ ನವೀನ್ ಸಜ್ಜು ಅವರಿಗೆ ಅಭಿಮಾನಿಗಳು ಅದ್ದೂರಿ ಸ್ವಾಗತ ಕೋರಿದರು. ನಾಸಿಕ್ ಬ್ಯಾಂಡ್‌ನ ಸದ್ದಿಗೆ ಸ್ಟೆಪ್ ಹಾಕಿದ ನವೀನ್ ಸಜ್ಜು ಸಿನಿರಸಿಕರನ್ನು ರಂಜಿಸಿ ಕಾರ್ಯಕ್ರಮಕ್ಕೆ ಮತ್ತಷ್ಟು ಕಳೆ ತಂದರು.

ಈ ವೇಳೆ ಶಾಸಕ ಸಿಮೆಂಟ್ ಮಂಜು ಮಾತನಾಡಿ, ಸಂಪೂರ್ಣ ಹಳ್ಳಿಯ ಸೊಗಡನ್ನು ಒಳಗೊಂಡಿರುವ ಲೋ ನವೀನ ಸಿನಿಮಾ ಕನ್ನಡ ಚಿತ್ರರಂಗಕ್ಕೆ ಹೊಸತನ ತರುವ ಚಿತ್ರವಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಸುಮಾರು ಹದಿನಾಲ್ಕು ವರ್ಷಗಳ ನಿರಂತರ ಪರಿಶ್ರಮದ ಬಳಿಕ ಇಂದು ನಾಯಕ ನಟನಾಗಿ ಹೊರಹೊಮ್ಮಿರುವ ನವೀನ್ ಸಜ್ಜು ಅವರ ಸಾಧನೆ ಶ್ಲಾಘನೀಯ. ಹಳ್ಳಿಯ ಬದುಕು, ಸಂಸ್ಕೃತಿ ಹಾಗೂ ಭಾವನೆಗಳನ್ನು ಜನರ ಮುಂದಿಡುವ ಕೆಲಸವನ್ನು ಈ ಸಿನಿಮಾ ಮಾಡಿದೆ ಎಂದು ಹೇಳಿದರು.

ನವೀನ್ ಸಜ್ಜು ಅವರು ಕನ್ನಡ ಚಿತ್ರರಂಗದಲ್ಲಿ ಇನ್ನಷ್ಟು ಎತ್ತರಕ್ಕೆ ಬೆಳೆಯಬೇಕು. ಲೋ ನವೀನ ಚಿತ್ರ ಯಶಸ್ವಿಯಾಗಿ ಶತದಿನೋತ್ಸವ ಆಚರಿಸಲಿ ಎಂದು ಶುಭ ಹಾರೈಸಿದರು.

# ರಾಷ್ಟ್ರೀಯತೆ ಅಳವಡಿಸಿಕೊಳ್ಳಲು ಸಿಮೆಂಟ್ ಮಂಜು ಸಲಹೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ವಿದ್ಯಾರ್ಥಿಗಳು ದೇಶಪ್ರೇಮ ಮತ್ತು ರಾಷ್ಟ್ರೀಯತೆಯನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಶಾಸಕ ಸಿಮೆಂಟ್ ಮಂಜು ಹೇಳಿದರು.

ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜುನಲ್ಲಿ 2025-26ನೇ ಸಾಲಿನ ಸಾಂಸ್ಕೃತಿಕ, ಕ್ರೀಡಾ, ರಾಷ್ಟ್ರೀಯ ಸೇವಾ ಯೋಜನೆ, ರೆಡ್ ಕ್ರಾಸ್ ಹಾಗೂ ಸ್ಕೌಟ್ಸ್ ಮತ್ತು ಗೈಡ್ಸ್ ಘಟಕಗಳ ಸಮಾರೋಪ ಸಮಾರಂಭ ಉದ್ಘಾಟಿಸಿ ಮಾತನಾಡಿದ ಅವರು, ಶಿಕ್ಷಣವೇ ವ್ಯಕ್ತಿಯ ಬದುಕನ್ನು ರೂಪಿಸುವ ಶಕ್ತಿಯಾಗಿದೆ ಎಂದು ಹೇಳಿದರು.

ಡಾ. ಬಿ.ಆರ್. ಅಂಬೇಡ್ಕರ್ ಅವರು ಕೊಲಂಬಿಯಾ ವಿಶ್ವವಿದ್ಯಾಲಯದಲ್ಲಿ ವ್ಯಾಸಂಗ ಮಾಡುತ್ತಿದ್ದ ವೇಳೆ ತಮ್ಮ ಬಹುತೇಕ ಸಮಯವನ್ನು ಗ್ರಂಥಾಲಯದಲ್ಲೇ ಕಳೆಯುತ್ತಿದ್ದರು. ಭಾರತದಲ್ಲಿದ್ದ ಅಸಮಾನತೆಯನ್ನು ನಿರ್ಮೂಲನೆ ಮಾಡಬೇಕೆಂಬ ದೃಢಸಂಕಲ್ಪವೇ ಅವರ ಸಾಧನೆಗೆ ಕಾರಣವಾಯಿತು ಎಂದು ಹೇಳಿದರು.

ಅಂಬೇಡ್ಕರ್ ರಚಿಸಿದ ಸಂವಿಧಾನದಿಂದ ಮಹಿಳೆಯರಿಗೆ ಸಮಾನ ಹಕ್ಕುಗಳು ದೊರೆತಿವೆ. ಮಹಿಳೆಯರಿಗೆ ಆಸ್ತಿ ಹಕ್ಕು, ಶಿಕ್ಷಣದ ಹಕ್ಕು, ರಾಜಕೀಯ ಹಕ್ಕು ಹಾಗೂ ಮತದಾನದ ಹಕ್ಕುಗಳನ್ನು ಕಲ್ಪಿಸಿದ ಮಹಾನ್ ವ್ಯಕ್ತಿತ್ವ ಅಂಬೇಡ್ಕರ್ ಅವರದು ಎಂದು ಹೇಳಿದರು.



ಹಣವನ್ನು ಯಾರಾದರೂ ಕಸಿದುಕೊಳ್ಳಬಹುದು. ಆದರೆ ಕಲಿತ ವಿದ್ಯೆಯನ್ನು ಯಾರೂ ಕಸಿದುಕೊಳ್ಳಲು ಸಾಧ್ಯವಿಲ್ಲ. ಕಾಲೇಜು ಪಟ್ಟಣದಿಂದ ದೂರದಲ್ಲಿದ್ದರೂ ಉತ್ತಮ ವಾತಾವರಣ ಹೊಂದಿದೆ. ವಿದ್ಯಾರ್ಥಿಗಳು ಪರೀಕ್ಷೆಗಳನ್ನು ಭಯಪಡದೆ ಧೈರ್ಯದಿಂದ ಎದುರಿಸಬೇಕು. ಧೈರ್ಯ ಇದ್ದರೆ ಮಾತ್ರ ಜೀವನದಲ್ಲಿ ಸಾಧನೆ ಸಾಧ್ಯ. ಸಾಮಾನ್ಯ ಕುಟುಂಬದಿಂದ ಬಂದ ನಾನು ಎದುರಾಳಿಗಳ ಭಯಕ್ಕೆ ಮಣಿದಿದ್ದರೆ ಶಾಸಕನಾಗಲು ಸಾಧ್ಯವಾಗುತ್ತಿರಲಿಲ್ಲ ಎಂದು ತಮ್ಮ ಬದುಕಿನ ಅನುಭವ ಹಂಚಿಕೊಂಡರು.

ಈ ಕಾಲೇಜಿನಲ್ಲಿ ವಿದ್ಯಾಭ್ಯಾಸ ಮಾಡಿದ ಅನೇಕ ವಿದ್ಯಾರ್ಥಿಗಳು ಸಮಾಜದಲ್ಲಿ ಉನ್ನತ ಸ್ಥಾನಮಾನ ಪಡೆದಿದ್ದಾರೆ. ವಿದ್ಯಾರ್ಥಿಗಳು ಉತ್ತಮವಾಗಿ ಓದಿ ಭವಿಷ್ಯ ರೂಪಿಸಿಕೊಳ್ಳಬೇಕು. ದೇಶದ ಅಭಿವೃದ್ಧಿಗಾಗಿ ಸ್ವದೇಶಿ ಉತ್ಪನ್ನಗಳ ಖರೀದಿಗೆ ಆದ್ಯತೆ ನೀಡಬೇಕು ಎಂದು ಕರೆ ನೀಡಿದರು.

ಪಟ್ಟಣದ ಸರ್ಕಾರಿ ಬಾಲಕಿಯರ ಪದವಿ ಪೂರ್ವ ಕಾಲೇಜು ಪ್ರಾಂಶುಪಾಲ ರಮೇಶ್ ಮಾತನಾಡಿ, ಕಾಲೇಜು ಜೀವನವೇ ಭವಿಷ್ಯದ ಅಡಿಪಾಯವಾಗಿದ್ದು, ವಿದ್ಯಾರ್ಥಿಗಳು ಕಲಿಕೆಗೆ ಹೆಚ್ಚಿನ ಮಹತ್ವ ನೀಡಬೇಕು ಎಂದು ಸಲಹೆ ನೀಡಿದರು.

ಈ ಸಂದರ್ಭದಲ್ಲಿ ವಿವಿಧ ಕ್ರೀಡಾ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಕಾಲೇಜಿನ ಪ್ರಾಂಶುಪಾಲೆ ಸಹನಾ, ಕಾಲೇಜು ಅಭಿವೃದ್ಧಿ ಸಮಿತಿ ಸದಸ್ಯರಾದ ಮಾಜಿ ಪುರಸಭಾ ಸದಸ್ಯ ಪ್ರದೀಪ್, ವಕೀಲ ಸುಧೀಶ್, ಸಮಾಜ ಸೇವಕ ಕೌಶಿಕ್ ಮತ್ತಿತರರಿದ್ದರು.

# ಮಾವಿನ ಹಣ್ಣಿನ ಬೆಲೆಯಲ್ಲಿ ಭಾರೀ ಕುಸಿತ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಹಣ್ಣುಗಳ ರಾಜ ಎಂದೇ ಖ್ಯಾತಿ ಪಡೆದಿರುವ ಮಾವು ಯತೇಚ್ಛ ಪ್ರಮಾಣದಲ್ಲಿ ಮಾರುಕಟ್ಟೆಗೆ ಲಗ್ಗೆ ಇಟ್ಟಿದ್ದು ಬೆಲೆ ಇಳಿಕೆಯಿಂದ ಗ್ರಾಹಕರು ಖುಷಿಯಾಗಿದ್ದರೆ ಬೆಳೆಗಾರರು ಕಂಗಾಲಾಗಿದ್ದಾರೆ.

ಕಳೆದ 15 ದಿನಗಳ ಹಿಂದೆ ಪ್ರತಿ ಕೆ.ಜಿ.ಗೆ 150 ರಿಂದ 200ರೂ.ಗೆ ಮಾರಾಟವಾಗುತ್ತಿದ್ದ ಮಾವು ಪ್ರಸ್ತುತ 40 ರಿಂದ 50 ರೂ.ಗೆ ಲಭ್ಯವಾಗುತ್ತಿದೆ. ಗುರುವಾರ ಬೆಳಿಗ್ಗೆ 7ರ ಸಮಯದಲ್ಲಿ ನಗರದ ಮಹಾವೀರ ವೃತ್ತದಲ್ಲಿ ಕೆ.ಜಿ.ಗೆ ಕೇವಲ 40 ರೂ.ನಂತೆ ಮಾರಾಟವಾಯಿತು. ಬೆಲೆ ಕುಸಿತದಿಂದ ಗ್ರಾಹಕರು ಮುಗಿಬಿದ್ದು ಖರೀದಿಯಲ್ಲಿ ತೊಡಗಿದ್ದರು.

ನಾನಾ ತಳಿಗಳ ಮಾವಿನ ಹಣ್ಣು ಏಕಕಾಲಕ್ಕೆ ಮಾರುಕಟ್ಟೆಗೆ ಪ್ರವೇಶಿಸಿದ್ದರಿಂದ ಬೆಲೆ ಕಡಿಮೆಯಾಗಿದೆ ಎನ್ನಲಾಗಿದೆ. ಈ ಬಾರಿ ನಿರೀಕ್ಷೆಯಂತೆ ಮಾವಿನ ಇಳುವರಿ ಹೆಚ್ಚಿದೆ. ಜಿಲ್ಲೆಯ 2500 ಹೆಕ್ಟೇರ್‌ಗೂ ಹೆಚ್ಚು ಪ್ರದೇಶದಲ್ಲಿ ಉತ್ತಮ ಫಸಲು ಬಂದಿದೆ. ಕೋಲಾರ, ರಾಮನಗರ, ತಿಪಟೂರು ಭಾಗದಿಂದ ನಿತ್ಯ ಹತ್ತಾರು ಲೋಡ್ ಮಾವು ಜಿಲ್ಲೆಗೆ ಬರುತ್ತಿದೆ. ಬಣ್ಣ, ರುಚಿ ಇದ್ದು, ಪ್ರಮುಖ ರಸ್ತೆಯ ಇಕ್ಕೆಲಗಳಲ್ಲಿ ಮಾವಿನ ಹಣ್ಣು ಮಾರಾಟ ಮಾಡಲಾಗುತ್ತಿದೆ.

ನೀಲಂ, ಬಾದಾಮಿ, ರಸಪೂರಿ, ಮಲಗೋಬಾ ಮತ್ತಿತರ ಹಣ್ಣುಗಳು ಯತೇಚ್ಛವಾಗಿ ಮಾರುಕಟ್ಟೆಯಲ್ಲಿ ಲಭ್ಯವಿದ್ದರೂ ಕೊಳ್ಳುವವರ ಸಂಖ್ಯೆ ಕ್ಷೀಣಿಸಿರುವುದು ಅಚ್ಚರಿಯ ಸಂಗತಿ ಎನ್ನುತ್ತಾರೆ ವ್ಯಾಪಾರಿಗಳು. ಇಳುವರಿ ಕಡಿಮೆ ಇದ್ದಾಗ ಗ್ರಾಹಕರು ಬೆಲೆ ಕೇಳಿಯೇ ಬೆಚ್ಚಿಬೀಳುತ್ತಾರೆ. ಈ ಬಾರಿ ಗುಣಮಟ್ಟದ ಹಾಗೂ ಅತ್ಯಂತ ಸಿಹಿಯಾದ ಹಣ್ಣು ಕೂಡ ಮಾರುಕಟ್ಟೆಗೆ ಬಂದಿದೆ. ಆದರೆ ಕೊಳ್ಳುವವರ ಸಂಖ್ಯೆ ಗಣನೀಯವಾಗಿ ಇಳಿಕೆಯಾಗಿದೆ.



ಈ ಬಾರಿ ಮಹಾರಾಷ್ಟ್ರದಲ್ಲಿಅಧಿಕ ಇಳುವರಿ ಬಂದಿರುವ ಕಾರಣ ಮಹಾರಾಷ್ಟ್ರ, ಗುಜರಾತ್, ಆಂಧ್ರ, ತಮಿಳುನಾಡಿನ ತಂಪು ಪಾನೀಯ ಕಾರ್ಖಾನೆಗಳಲ್ಲೂ ಕರ್ನಾಟಕದ ಹಣ್ಣಿಗೆ ಬೇಡಿಕೆ ಕಡಿಮೆಯಾಗಿದೆ ಎನ್ನಲಾಗಿದೆ.

## ಅಕಾಲಿಕ ಮಳೆಯಿಂದ ತೊಂದರೆ

ಹಾಸನ ಜಿಲ್ಲೆಯ ಅರಸೀಕೆರೆ, ಚನ್ನರಾಯಪಟ್ಟಣ ಹಾಗೂ ಹಾಸನದ ಸ್ವಲ್ಪ ಭಾಗದಲ್ಲಿ ಮಾವು ಬೆಳೆಯಲಾಗುತ್ತದೆ. ಕಳೆದ ಕೆಲವು ದಿನಗಳ ಹಿಂದೆ ಸುರಿದ ಅಕಾಲಿಕ ಮಳೆಯೂ ಬೆಲೆ ಕುಸಿತಕ್ಕೆ ಕಾರಣವೆಂದು ತಿಳಿದುಬಂದಿದೆ.

ಆಲಿಕಲ್ಲು ಮಳೆ, ಬಿರುಗಾಳಿಯಿಂದ ಮಾವು ಬೆಳೆಗೆ ಹಾನಿಯುಂಟಾಯಿತು. ಇನ್ನೇನು ಮರದಿಂದ ನೆಲಕ್ಕೆ ಉದುರಿ ಬೀಳುತ್ತವೆಂಬ ಭಯ ಬೆಳೆಗಾರರಲ್ಲಿ ಆವರಿಸಿತು. ಆದ್ದರಿಂದ ಅವಧಿಗೂ ಮೊದಲೇ ಮಾವು ಕೆಡವಿ ಮಾರಾಟಕ್ಕೆ ಮುಂದಾದರು. ಹೀಗಾಗಿ ಇನ್ನು ಹದಿನೈದು ದಿನಗಳ ಬಳಿಕ ಮಾರುಕಟ್ಟೆಗೆ ಬರಬೇಕಿದ್ದ ಪದಾರ್ಥ ಈಗಲೇ ಮಾರುಕಟ್ಟೆಯನ್ನು ಆವರಿಸಿಕೊಂಡಿದೆ.

## ಮೋಸದ ವ್ಯಾಪಾರಕ್ಕೆ ಬಲಿಯಾಗಬೇಡಿ

ಪ್ರಸ್ತುತ ಮಾರುಕಟ್ಟೆಯಲ್ಲಿ ಸಿಗುತ್ತಿರುವ ಮಾವು ಬಹುತೇಕ ಗುಣಮಟ್ಟದ್ದಾಗಿದೆ. ರಸಪೂರಿ ಮಾವಿಗೆ ಮಾತ್ರ ಸ್ವಲ್ಪ ಬೆಲೆ ಅಧಿಕ ಎನ್ನಬಹುದು. ಆದರೆ ಗ್ರಾಹಕರ ಅಮಾಯಕತೆಯನ್ನು ಬಲಿ ಪಡೆಯುತ್ತಿರುವ ಕೆಲವು ವ್ಯಾಪಾರಿಗಳು ಕಳಪೆ ಗುಣಮಟ್ಟದ ಮಾವು ಮಾರಾಟ ಮಾಡಿ ಆರೋಗ್ಯದ ಮೇಲೆ ಸವಾರಿ ಮಾಡುತ್ತಿರುವ ಘಟನೆಗಳು ಬೆಳಕಿಗೆ ಬಂದಿವೆ. ಗೂಡ್ಸ್ ವಾಹನಗಳಲ್ಲಿ ಮಾವು ಮಾರಾಟಕ್ಕೆ ಬರುವ ವ್ಯಾಪಾರಿಗಳು 100 ರೂ.ಗೆ 4 ಕೆ.ಜಿ. ಕೊಡುತ್ತಿದ್ದಾರೆ. ಆದರೆ ಅದು ಸಂಪೂರ್ಣ ಕಳಪೆ ಪದಾರ್ಥವಾಗಿದ್ದು ಸಾರ್ವಜನಿಕರು ಖರೀದಿಸಿ ಮೋಸ ಹೋಗುತ್ತಿದ್ದಾರೆ. ಮಾವು ಖರೀದಿಸುವ ಮುನ್ನ ಎಚ್ಚರ ವಹಿಸುವುದು ಅತ್ಯಗತ್ಯವಾಗಿದೆ.

ಪ್ರಸ್ತುತ ದಿನಗಳಲ್ಲಿ ಬಿಸಿಲಿನ ಪ್ರಖರತೆ ಹೆಚ್ಚಿದ್ದು ಅತಿಯಾದ ಮಾವಿನ ಹಣ್ಣು ಸೇವನೆಯೂ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರಲಿದೆ. ಮಕ್ಕಳಿಗೆ ಹಣ್ಣು ನೀಡಿದರೂ ಅದು ಕಡಿಮೆ ಪ್ರಮಾಣದಲ್ಲಿರಬೇಕೆಂದು ತಜ್ಞರು ಅಭಿಪ್ರಾಯಪಡುತ್ತಾರೆ.

> ಜಿಲ್ಲೆಯ ಅರಸೀಕೆರೆ, ಚನ್ನರಾಯಪಟ್ಟಣ ಹಾಗು ಹಾಸನ ವ್ಯಾಪ್ತಿಯಲ್ಲಿ ಮಾವು ಬೆಳೆಯಲಾಗುತ್ತದೆ. ಈ ಬಾರಿ 2500 ಹೆಕ್ಟೇರ್ ಪ್ರದೇಶದಲ್ಲಿ ಬೆಳೆ ಕೈಗೊಳ್ಳಲಾಗಿದೆ. ಜಿಲ್ಲೆಗೆ ಹೊರ ಜಿಲ್ಲೆಯಿಂದ ಹೆಚ್ಚಿನ ಪ್ರಮಾಣದಲ್ಲಿ ಪದಾರ್ಥ ಬರುತ್ತದೆ. ಬೆಲೆ ಕುಸಿತದಿಂದ ಬೆಳೆಗಾರರು ಸಮಸ್ಯೆಗೆ ಸಿಲುಕಿದ್ದಾರೆ.
>
> -ಯೋಗೇಶ್,
> ತೋಟಗಾರಿಕೆ ಇಲಾಖೆ ಉಪನಿರ್ದೇಶಕ

# 14.30 ಕೋಟಿ ರೂ. ವೆಚ್ಚದಲ್ಲಿ ಆಯುಷ್ಮಾನ್ ಆರೋಗ್ಯ ಮಂದಿರ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಕಲಗೂಡು: ತಾಲೂಕಿನ 22 ಗ್ರಾಮಗಳಲ್ಲಿ ಪಿಎಂ ಅಭಿಮ್ ಯೋಜನೆಯಡಿ ಒಟ್ಟು 14.30 ಕೋಟಿ ರೂ. ವೆಚ್ಚದಲ್ಲಿ ಆಯಷ್ಮಾನ್ ಆರೋಗ್ಯ ಮಂದಿರ ನಿರ್ಮಾಣ ಕಾಮಗಾರಿಯನ್ನು ಕೈಗೊಳ್ಳಲಾಗುತ್ತಿದೆ ಎಂದು ಶಾಸಕ ಎ.ಮಂಜು ತಿಳಿಸಿದರು.

ತಾಲೂಕಿನ ಬೂದನೂರು ಗ್ರಾಮದಲ್ಲಿ 65 ಲಕ್ಷ ರೂ. ವೆಚ್ಚದ ಆರೋಗ್ಯ ಉಪ ಕೇಂದ್ರ, ಕಟ್ಟಡ ನಿರ್ಮಾಣ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿ ಮಾತನಾಡಿದ ಅವರು, ಈಗಾಗಲೇ ಹತ್ತಕ್ಕೂ ಹೆಚ್ಚು ಉಪ ಕೇಂದ್ರ ನಿರ್ಮಾಣ ಕಾಮಗಾರಿಗೆ ಚಾಲನೆ ನೀಡಲಾಗಿದೆ. ಕೆಲವು ಕಟ್ಟಡಗಳ ಕೆಲಸ ಪ್ರಗತಿಯಲ್ಲಿದೆ. ಉಳಿದ ಗ್ರಾಮಗಳಲ್ಲಿ ಸದ್ಯದಲ್ಲಿಯೆ ಶಂಕುಸ್ಥಾಪನೆ ನೆರವೇರಿಸಲಾಗುವುದು ಎಂದು ಹೇಳಿದರು.

ತಾಲೂಕಿನ ಬೆಟ್ಟದಹಳ್ಳಿ, ಅಬ್ಬೂರು-ಮಾಚಗೋಡನಹಳ್ಳಿ, ಬಿದರೂರು, ಕೆ.ಅಬ್ಬೂರು, ಚಿಕ್ಕಅರಕಲಗೂಡು, ದೊಡ್ಡಮಗ್ಗೆ, ಹಾನಗಲ್, ಹುಲಿಕಲ್, ಕೇರಳಾಪುರದಲ್ಲಿ ಎರಡು, ಕಡುವಿನಹೊಸಳ್ಳಿ, ಸಂತೆಮರೂರು, ತಟ್ಟವಾಳು, ವಡವನಹೊಸಳ್ಳಿ, ಹೆಚ್.ಕೊಂಗಳಲೆ, ವಡ್ಡರಹಳ್ಳಿ, ದೇವರಹಳ್ಳಿ, ಗಂಜಲಗೂಡು, ಕಾಳೇನಹಳ್ಳಿ, ಮಧರನಹಳ್ಳಿ, ಹೆಬ್ಬಹೆಬ್ಬಾಲೆ, ಚಿಕ್ಕಬೆಮ್ಮತ್ತಿ ಗ್ರಾಮಗಳಲ್ಲಿ ಆಯುಷ್ಮಾನ್ ಆರೋಗ್ಯ ಉಪ ಕೇಂದ್ರಗಳ ಕಟ್ಟಡಗಳು ನಿರ್ಮಾಣಗೊಳ್ಳಲಿವೆ. ಅದರಿಂದ ಜನಸಾಮಾನ್ಯರಿಗೆ ತಕ್ಷಣದ ಆರೋಗ್ಯ ಸೇವೆ ದೊರೆಯಲು ಅನುಕೂಲವಾಗಲಿದೆ ಎಂದು ಮಾಹಿತಿ ನೀಡಿದರು.

ಮನುಷ್ಯ ಶಾಶ್ವತವಲ್ಲ, ಅಭಿವೃದ್ಧಿ ಕಾರ್ಯಗಳೇ ಶಾಶ್ವತ ನಾವು ಮಾಡಿದ ಪುಣ್ಯ ಕೆಲಸಗಳೇ ನಮ್ಮ ಹೆಸರನ್ನು ಸ್ಮರಿಸುತ್ತವೆ. ಉಪಕೇಂದ್ರ ಕಟ್ಟಡದ ಕಾಮಗಾರಿಯನ್ನು ಗುಣಮಟ್ಟದಲ್ಲಿ ತುರ್ತಾಗಿ ಮಾಡಿಸುವಂತೆ ಗುತ್ತಿಗೆದಾರರಿಗೆ ಸೂಚಿಸಿದರು.

# ಜೂ. 2ಕ್ಕೆ ಚಿತ್ರಕಲಾ ಸ್ಪರ್ಧೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಪ್ರಾದೇಶಿಕ ಕಚೇರಿ ವತಿಯಿಂದ ಶಾಲಾ ಮಕ್ಕಳಿಗಾಗಿ ಜೂ.2 ರಂದು ಬೆಳಿಗ್ಗೆ 10 ಗಂಟೆಗೆ ನಗರದ ಮಹಾರಾಜ ಪಾರ್ಕ್‌ನಲ್ಲಿ ಚಿತ್ರಕಲಾ ಸ್ಪರ್ಧೆ ಏರ್ಪಡಿಸಲಾಗಿದೆ.

ಕಿರಿಯ, ಹಿರಿಯ ಪ್ರಾಥಮಿಕ ಹಾಗೂ ಪ್ರೌಢಶಾಲಾ ಮಕ್ಕಳಿಗಾಗಿ ಪರಿಸರ ಕುರಿತು, ಪ್ರಕೃತಿಯಿಂದ ಪ್ರೇರಿತ ಹವಾಮಾನಕ್ಕಾಗಿ ನಮ್ಮ ಭವಿಷ್ಯಕ್ಕಾಗಿ ಎಂಬ ಘೋಷ ವಾಕ್ಯದ ಕುರಿತು ಸ್ಪರ್ಧೆ ಏರ್ಪಡಿಸಲಾಗಿದೆ. 1ರಿಂದ 5ನೇ ತರಗತಿ, 6 ರಿಂದ 8ನೇ ತರಗತಿ ಮತ್ತು 9 ಮತ್ತು 10ನೇ ತರಗತಿಯವರಿಗೆ ಮೂರು ವಿಭಾಗಗಳಲಿ ಸ್ಥಳದಲ್ಲೇ ಚಿತ್ರ ಬರೆಯುವ ಸ್ಪರ್ಧೆ ನಡೆಯಲಿದೆ. ಡ್ರಾಯಿಂಗ್ ಶೀಟ್ ಅನ್ನು ಮಂಡಳಿಯಿಂದ ನೀಡಲಾಗುವುದು. ಚಿತ್ರಕಲೆಗೆ ಬೇಕಾಗುವ ಬಣ್ಣ ಇನ್ನಿತರೆ ವಸ್ತುಗಳನ್ನು ವಿದ್ಯಾರ್ಥಿಗಳೇ ತರಬೇಕು. ಆಸಕ್ತಿಯುಳ್ಳವರು ಸ್ಥಳದಲ್ಲಿಯೇ ತಮ್ಮ ಹೆಸರು ನೋಂದಾಯಿಸಿಕೊಳ್ಳಬಹುದು. ಹೆಚ್ಚಿನ ವಿವರಗಳಿಗಾಗಿ ಪರಿಸರ ಅಧಿಕಾರಿ ಭಾಸ್ಕರ್ (9972993021), ಕಚೇರಿಯ ದೂರವಾಣಿ ಸಂಖ್ಯೆ: 08172-241004ಗೆ ಹಾಗು ಸ್ಥಳೀಯ ಸಾರ್ವಜನಿಕ ಶಿಕ್ಷಣ ಇಲಾಖೆ, ಕ್ಷೇತ್ರ ಶಿಕ್ಷಣಾಧಿಕಾರಿಗಳು (ಬಿಇಒ) ಸಂಪರ್ಕಿಸಬಹುದಾಗಿದೆ.

# ಎಸ್‌ಎಸ್‌ಎಲ್‌ಸಿ ಫಲಿತಾಂಶ ಸುಧಾರಣೆಗೆ ಈಗಿನಿಂದಲೇ ಶ್ರಮಿಸಿ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಕಲಗೂಡು: ತಾಲೂಕಿನಾದ್ಯಂತ ಎಲ್ಲಾ ಪ್ರೌಢ ಶಾಲೆಗಳಲ್ಲಿ ಎಸ್ಸೆಸ್ಸೆಲ್ಸಿ ವಿದ್ಯಾರ್ಥಿಗಳಿಗೆ ಆರಂಭದಲ್ಲಿಯೇ ಗುಣಾತ್ಮಕ ಶಿಕ್ಷಣ ಬೋಧನಾ ಕ್ರಮ ಹಾಗೂ ಶೇ.100ರಷ್ಟು ಫಲಿತಾಂಶ ಗುರಿ ಇಟ್ಟುಕೊಂಡು ಮಕ್ಕಳ ಮುಂದಿನ ಭವಿಷ್ಯಕ್ಕೆ ಇಂದಿನಿಂದಲೇ ಕಾರ್ಯೋನ್ಮುಖರಾಗಬೇಕೆಂದು ಶಾಸಕ ಎ.ಮಂಜು ಶಿಕ್ಷಕರಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಶಿಕ್ಷಣ ಇಲಾಖೆ ಮತ್ತು ಜಿಲ್ಲಾ ಮಕ್ಕಳ ಸಾಹಿತ್ಯ ಪರಿಷತ್ ವತಿಯಿಂದ ಗುರುವಾರ ಪಟ್ಟಣದ ಶಿಕ್ಷಕರ ಭವನದಲ್ಲಿ ಹಮ್ಮಿಕೊಂಡಿದ್ದ ಅರಕಲಗೂಡು ವಿದ್ಯಾ ಸಂಭ್ರಮ-2026 ವಿನೂತನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ತಾಲೂಕು ಜಿಲ್ಲೆಯಲ್ಲಿಯೇ ಅತ್ಯುತ್ತಮ ಫಲಿತಾಂಶ ಪಡೆದ ಹೆಗ್ಗಳಿಕೆಗೆ ಪಾತ್ರವಾಗಿದೆ. ಶಾಲಾ ಆರಂಭೋತ್ಸವದಲ್ಲಿಯೇ ಮಕ್ಕಳು, ಪೋಷಕರನ್ನು ಸೆಳೆಯುವ ನಿಟ್ಟಿನಲ್ಲಿ ಕಾರ್ಯಕ್ರಮ ಆಯೋಜನೆ ಮಾಡಬೇಕೆಂದು ತಿಳಿಸಿದರು.

ಇಂದು ಒಂದೇ ವೇದಿಕೆಯಡಿ ತಾಲೂಕಿನ 59 ಪ್ರೌಢಶಾಲೆಗಳಲ್ಲಿ ಎಸ್ಸೆಸ್ಸೆಲ್ಸಿ ಪರೀಕ್ಷೆಯಲ್ಲಿ ಅತೀ ಹೆಚ್ಚು ಅಂಕ ಪಡೆದ ಇಬ್ಬರು ವಿದ್ಯಾರ್ಥಿಗಳನ್ನು ಪ್ರೋತ್ಸಾಹಿಸುವ ಉದ್ದೇಶದಿಂದ ಅಭಿನಂದನಾ ಸಮಾರಂಭ ಹಮ್ಮಿಕೊಳ್ಳಲಾಗಿದೆ. ಇದು ಜಿಲ್ಲೆಯಲ್ಲಿಯೇ ಇತಿಹಾಸವನ್ನು ಸೃಷ್ಟಿಸಿದೆ. ಅಲ್ಲದೆ ಶೇ.100 ಫಲಿತಾಂಶ ಪಡೆದಿರುವ 40 ಶಾಲೆಗಳ ಶಿಕ್ಷಕರನ್ನು ಸಹ ಗೌರವಿಸಲಾಗುತ್ತಿದೆ. ಪ್ರಮುಖವಾಗಿ ಸಾಧಕ ವಿದ್ಯಾರ್ಥಿಗಳೊಂದಿಗೆ ಮುಕ್ತ ಸಂವಾದ ನಡೆಸಿದ್ದು, ಸಾಧಕ ವಿದ್ಯಾರ್ಥಿಗಳಿಂದ ಎಲ್ಲಾ ವಿದ್ಯಾರ್ಥಿಗಳು ಸ್ಪೂರ್ತಿ ಪಡೆದು ತಮ್ಮ ಮುಂದಿನ ಜೀವನ ರೂಪಿಸಿಕೊಳ್ಳಲು ಕಠಿಣ ಶ್ರಮದಿಂದ ವಿದ್ಯಾಭ್ಯಾಸ ಮಾಡುವಂತೆ ಎಲ್ಲಾ ವಿದ್ಯಾರ್ಥಿಗಳಿಗೆ ಮನವಿ ಮಾಡಿದರು.

ಮಕ್ಕಳ ಸಾಹಿತ್ಯ ಪರಿಷತ್ ಮುಖ್ಯಸ್ಥ ಬಿ.ಕೆ.ಗಂಗಾಧರ್ ಮಾತನಾಡಿ, ತಾಲೂಕಿನಲ್ಲಿ ಶಿಕ್ಷಣ ಕ್ರಾಂತಿ ಆರಂಭಗೊಂಡಿದೆ. ಇದಕ್ಕೆ ಶಾಸಕ ಎ.ಮಂಜಣ್ಣ ಅವರ ಅಭೂತಪೂರ್ವ ಬೆಂಬಲ ಕಾರಣವಾಗಿದೆ. ಅವರು ಶಿಕ್ಷಣ ಪ್ರೇಮಿಯಾಗಿರುವ ಹಿನ್ನೆಲೆ ಸದಾ ಮಕ್ಕಳ ಶಿಕ್ಷಣದ ಬಗ್ಗೆ ಗಮನಹರಿಸುತ್ತಾರೆ. ವಿದ್ಯಾರ್ಥಿಗಳ ಮುಂದಿನ ವಿದ್ಯಾಭ್ಯಾಸಕ್ಕಾಗಿ ಪೋಷಕರು ಹೆಚ್ಚಿನ ಗಮನ ಹರಿಸುವಂತೆ ಮನವಿ ಮಾಡಿದರು.

ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಪಿ.ನಾರಾಯಣ ಮಾತನಾಡಿ, ತಾಲೂಕಿನ 59 ಪ್ರೌಢಶಾಲೆಗಳ ಪೈಕಿ 40 ಪ್ರೌಢ ಶಾಲೆಗಳಲ್ಲಿ ಶೇ. 100ರಷ್ಟು ಫಲಿತಾಂಶ ಪಡೆಯಲಾಗಿದೆ. ಕಳೆದ ಬಾರಿ ನಮ್ಮ ಶಾಲೆಗಳ ಎಲ್ಲಾ ಶಿಕ್ಷಕರು ಶಾಸಕರ ಸೂಚನೆಯನ್ನು ಪಾಲನೆ ಮಾಡುವ ಮೂಲಕ ನಿರೀಕ್ಷಿತ ಫಲಿತಾಂಶವನ್ನು ಪಡೆಯಲು ಸಾಧ್ಯವಾಗಿದೆ. ಈ ಸಾಲಿನ ಆರಂಭಿಕ ಅವಧಿಯಲ್ಲಿಯೇ ಪ್ರಾಥಮಿಕ ಶಿಕ್ಷಣಕ್ಕೂ ಹೆಚ್ಚು ಒತ್ತು ನೀಡುವ ಗುರಿ ಹೊಂದಲಾಗಿದೆ ಎಂದರು.

ಶಿಕ್ಷಣ ಸಂಸ್ಥೆ ಸಂಘ ಸಂಸ್ಥೆಯ ಎಲ್ಲಾ ಪದಾಧಿಕಾರಿಗಳು, ಶಿಕ್ಷಕರು, ವಿದ್ಯಾರ್ಥಿಗಳು, ಪೋಷಕರು ಉಪಸ್ಥಿತರಿದ್ದರು.

# ಸಂವಿಧಾನವೇ ಸಮಾನತೆ-ಸ್ವಾತಂತ್ರ್ಯದ ಶಕ್ತಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಸಕಲೇಶಪುರ: ದೇಶದ ಪ್ರತಿಯೊಬ್ಬರಿಗೂ ಗೌರವಯುತ ಸ್ಥಾನಮಾನ, ಸಮಾನತೆ ಹಾಗು ಅಭಿವ್ಯಕ್ತಿ ಸ್ವಾತಂತ್ರ್ಯ ದೊರಕಲು ಡಾ. ಬಿ.ಆರ್.ಅಂಬೇಡ್ಕರ್ ಅವರು ರಚಿಸಿದ ಸಂವಿಧಾನ ಕಾರಣವೆಂದು ಶಾಸಕ ಸಿಮೆಂಟ್ ಮಂಜು ಹೇಳಿದರು.

ತಾಲ್ಲೂಕಿನ ಬಾಳ್ಳುಪೇಟೆಯಲ್ಲಿ ಗುರುವಾರ ಡಾ. ಬಿ.ಆರ್.ಅಂಬೇಡ್ಕರ್ ಜಯಂತಿ ಆಚರಣೆ ಸಮಿತಿ ವತಿಯಿಂದ ಆಯೋಜಿಸಿದ್ದ 135ನೇ ಅಂಬೇಡ್ಕರ್ ಜಯಂತಿ ಭೀಮೋತ್ಸವ ಉದ್ಘಾಟಿಸಿ ಮಾತನಾಡಿದ ಅವರು, ಸಮಾಜದ ಕಟ್ಟಕಡೆಯ ವ್ಯಕ್ತಿಗೂ ಸಮಾನ ಅವಕಾಶಗಳು ಸಿಗಬೇಕೆಂಬ ಸಂದೇಶವನ್ನು ಸಂವಿಧಾನ ಸಾರುತ್ತದೆ. ಅಂಬೇಡ್ಕರ್ ರಚಿಸಿದ ಸಂವಿಧಾನದಿಂದ ಮಹಿಳೆಯರಿಗೆ ಸಮಾನ ಹಕ್ಕುಗಳು ದೊರೆತಿದ್ದು, ಸ್ತ್ರೀಯರು ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಲು ಸಾಧ್ಯವಾಗಿದೆ. ಮಹಿಳೆಯರು ಶಿಕ್ಷಣ ಪಡೆದು ಉನ್ನತ ಹುದ್ದೆಗಳನ್ನು ಅಲಂಕರಿಸುತ್ತಿರುವುದು ಅಂಬೇಡ್ಕರ್ ಅವರ ದೂರದೃಷ್ಟಿಯ ಫಲ ಎಂದು ಹೇಳಿದರು.

ಭಾರತೀಯ ಸಮಾಜದಲ್ಲಿ ಮಹಿಳೆಯರನ್ನು ಸಂಕೋಲೆಗಳಿಂದ ಬಿಡುಗಡೆಗೊಳಿಸಿ ಅವರಿಗೆ ಸ್ವಾತಂತ್ರ್ಯ ಹಾಗೂ ಸಮಾನತೆಯ ತತ್ವಗಳನ್ನು ಸಂವಿಧಾನಾತ್ಮಕವಾಗಿ ದೊರಕಿಸಿಕೊಡುವಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ಅವರ ಕೊಡುಗೆಯನ್ನು ಯಾರೂ ಮೀರಿಸಲು ಸಾಧ್ಯವಿಲ್ಲ. ಅವರ ಸೇವೆಯನ್ನು ದೇಶ ಎಂದಿಗೂ ಮರೆಯುವುದಿಲ್ಲವೆಂದರು.

ಅಕ್ಕ ಐಎಎಸ್ ಅಕಾಡೆಮಿ ನಿರ್ದೇಶಕ ಶಿವಕುಮಾರ್ ಮಾತನಾಡಿ, ಅಂಬೇಡ್ಕರ್ ಬಗ್ಗೆ ಅಭಿಮಾನ ಹೆಚ್ಚಾಗಿದೆ. ಅವರ ವಿಚಾರಧಾರೆಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವ ಮನೋಭಾವ ಕಡಿಮೆಯಾಗಿದೆ. ಅವರ ಚಿಂತನೆಗಳನ್ನು ಅರ್ಥ ಮಾಡಿಕೊಂಡು ಅನುಸರಿಸಿದಾಗ ಮಾತ್ರ ಜೀವನ ಪರಿಪೂರ್ಣವಾಗುತ್ತದೆ ಎಂದರು.

ಅಂಬೇಡ್ಕರ್ ಅವರ ಕನಸು ನನಸಾಗಲಿಲ್ಲ ಎಂದು ಹೇಳುವ ಮೊದಲು ಅವರ ಕನಸು ಏನು ಎಂಬುದನ್ನು ಅರಿಯಬೇಕು. ಸಮಾಜದಲ್ಲಿನ ಸಮಸ್ಯೆಗಳನ್ನು ಬಗೆಹರಿಸಲು ಜ್ಞಾನ ಅತ್ಯಗತ್ಯ. ಪೋಷಕರು ಮಕ್ಕಳ ವಿದ್ಯಾಭ್ಯಾಸಕ್ಕೆ ಪೂರಕ ವಾತಾವರಣ ನಿರ್ಮಿಸಬೇಕು. ಒಂದು ಊರಿನ ಘನತೆ-ಗೌರವ ಹೆಚ್ಚಾಗುವುದು ಆ ಊರಿನಲ್ಲಿ ಎಷ್ಟು ಸಾಧಕರು ರೂಪುಗೊಳ್ಳುತ್ತಾರೆಂಬುದರ ಮೇಲೆ ಅವಲಂಬಿತವಾಗಿದೆ ಎಂದರು.

ಸಂಸದ ಶ್ರೇಯಸ್ ಪಟೇಲ್ ಮಾತನಾಡಿ, ಅಂಬೇಡ್ಕರ್ ಅವರ ಘೋಷವಾಕ್ಯ ಶಿಕ್ಷಿತರಾಗಿ, ಸಂಘಟಿತರಾಗಿ, ಹೋರಾಡಿ ಎಂಬ ಸಂದೇಶ ಇಂದಿಗೂ ಪ್ರಸ್ತುತವಾಗಿದೆ. ಮಕ್ಕಳಿಗೆ ಉತ್ತಮ ಶಿಕ್ಷಣ ನೀಡುವುದು ಪೋಷಕರ ಜವಾಬ್ದಾರಿ ಎಂದು ಹೇಳಿದರು.

ಮಾಜಿ ಶಾಸಕ ಹೆಚ್.ಕೆ.ಕುಮಾರಸ್ವಾಮಿ, ಹಾಸನದ ಮಲೆನಾಡು ಇಂಜಿನಿಯರಿಂಗ್ ಕಾಲೇಜು ಆಡಳಿತ ಮಂಡಳಿ ಅಧ್ಯಕ್ಷ ಬಿ.ಆರ್.ಗುರುದೇವ್, ಕರ್ನಾಟಕ ಅಂಬೇಡ್ಕರ್ ಪ್ರಶಸ್ತಿ ಪುರಸ್ಕೃತ ಅಣ್ಣಯ್ಯ ಹೆತ್ತೂರು, ಬಿಎಸ್‌ಪಿ ಜಿಲ್ಲಾಧ್ಯಕ್ಷ ಲಕ್ಷಣ ಕೀರ್ತಿ, ಜಿಲ್ಲಾ ಪತ್ರಕರ್ತರ ಸಂಘದ ಮಾಜಿ ಅಧ್ಯಕ್ಷ ಬಾಳ್ಳುಗೋಪಾಲ್, ಬಿಜೆಪಿ ಜಿಲ್ಲಾ ಮಹಿಳಾ ಮೋರ್ಚಾ ಅಧ್ಯಕ್ಷೆ ನೇತ್ರಾವತಿ ಮಂಜುನಾಥ್, ಧರ್ಮಗುರು ಸುಲೈಮಾನ್ ಮೊದಲಾದವರಿದ್ದರು.

# ಸೆಕ್ಷನ್ 4 ಹೆಸರಲ್ಲಿ ಅರಣ್ಯ ಇಲಾಖೆಯಿಂದ ದಬ್ಬಾಳಿಕೆ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಸಕಲೇಶಪುರ ತಾಲ್ಲೂಕು ಕಿರುಹುಣಸೆ ಗ್ರಾಮದಲ್ಲಿ ವ್ಯಕ್ತಿಯೊಬ್ಬರಿಗೆ ಸೇರಿದ ಜಮೀನನ್ನು ಅರಣ್ಯ ಇಲಾಖೆ ತನ್ನ ಜಾಗವೆಂದು ಪ್ರತಿಪಾದಿಸಿ ದಬ್ಬಾಳಿಕೆ ನಡೆಸುತ್ತಿದೆ ಎಂದು ಮಲೆನಾಡು ರಕ್ಷಣಾ ವೇದಿಕೆ ರಾಜ್ಯಾಧ್ಯಕ್ಷ ಸಾಗರ್ ಜಾನೆಕೆರೆ ಆರೋಪಿಸಿದರು.

ಸುದ್ದಿಗೋಷ್ಠಿಯಲ್ಲಿ ಗುರುವಾರ ಮಾತನಾಡಿದ ಅವರು, ಗ್ರಾಮದ ಸರ್ವೆ ನಂ. 72/1ರಲ್ಲಿ 4 ಎಕರೆ 38 ಗುಂಟೆ ಜಾಗವನ್ನು ಬಿ.ಎನ್.ದಿನೇಶ್ ಅವರು 2025ರ ಜುಲೈ 27ರಂದು ಕ್ರಯಪತ್ರದ ಮೂಲಕ ಖರೀದಿಸಿದ್ದಾರೆ. ಕಾಫಿ ಬೆಳೆ ಮಾಡಿಕೊಂಡಿದ್ದು ಆಗಾಗ ದಿನೇಶ್ ಅವರು ತೋಟಕ್ಕೆ ಭೇಟಿ ನೀಡುತ್ತಾರೆ. ಆದರೆ ಜಾಗದಲ್ಲಿ ಅಕೆಶಿಯಾ ಸೇರಿ ಇತರ ಕಾಡು ಮರಗಳು ಬೆಳೆದಿವೆಯೆಂಬ ಕಾರಣಕ್ಕೆ ಅರಣ್ಯ ಇಲಾಖೆ ಅಧಿಕಾರಿಗಳು ಆ ಜಾಗ ಅರಣ್ಯ ಇಲಾಖೆಗೆ ಸೇರಿದೆಯೆಂದು ದಬ್ಬಾಳಿಕೆ ಮಾಡುತ್ತಿದ್ದಾರೆ ಎಂದು ಆರೋಪಿಸಿದರು.

1978ರಲ್ಲಿ ದರಖಾಸ್ತು ಮೂಲಕ ಮಂಜೂರಾದ ಭೂಮಿ ಅದಾಗಿದೆ. 1982ರಲ್ಲಿ ಫಲಾನುಭವಿಗಳಿಗೆ ಸಾಗುವಳಿ ಚೀಟಿ ನೀಡಲಾಗಿದೆ. ಕಳೆದ 44 ವರ್ಷಗಳಿಂದ ಅನುಭವದಲ್ಲಿ ರೈತರಿದ್ದಾರೆ. ಆದರೆ ಕಳೆದ ಎರಡು ತಿಂಗಳಲ್ಲಿ ಏಕಾಏಕಿ ಅರಣ್ಯ ಇಲಾಖೆ ದಾಂಗುಡಿ ಇಟ್ಟಿದ್ದು ಏಕೆ ಎಂದು ಪ್ರಶ್ನಿಸಿದರು.

ತಾಲ್ಲೂಕಿನಲ್ಲಿ ಅರಣ್ಯ ಇಲಾಖೆ ಅಧಿಕಾರಿಗಳ ಉಪಟಳ ಮಿತಿ ಮೀರಿದೆ. ಕಾಡಾನೆಗಳ ಚಲನವಲನ ಅರಿಯಲು ಹಾಗೂ ಓಡಿಸಲು ನಿಯೋಜನೆಗೊಂಡಿರುವ ಇಟಿಎಫ್ ಸಿಬ್ಬಂದಿಯನ್ನು ಅನ್ಯ ಕೆಲಸಕ್ಕೆ ಬಳಸಿಕೊಳ್ಳುತ್ತಾರೆ. ಅಧಿಕಾರಿಗಳ ಮನೆ ಕೆಲಸ, ಕಾರು ಓಡಿಸುವುದು ಸಿಬ್ಬಂದಿ ಕೆಲಸವಾಗಿದೆ. ದಿನೇಶ್ ಅವರ ಜಮೀನಿಗೆ ಬೇಲಿ ಹಾಕಲು ಇಟಿಎಫ್ ಹುಡುಗರನ್ನು ಬಳಸಿಕೊಂಡಿದ್ದಾರೆ. ಇಷ್ಟು ಮಾತ್ರವಲ್ಲದೆ ದಿನೇಶ್ ಪರವಾಗಿ ನಾವು ಮಾತನಾಡಿದ್ದಕ್ಕೆ ಹಲ್ಲೆಗೆ ಮುಂದಾಗಿದ್ದಾರೆಂದು ಆರೋಪಿಸಿದರು.

ಸಕಲೇಶಪುರದಲ್ಲಿ ಅಧಿಕಾರಿಗಳಿಗೆ ಹೇಳುವವರು ಕೇಳುವವರು ಯಾರೂ ಇಲ್ಲವಾಗಿದ್ದಾರೆ.

ದಿನೇಶ್ ಅವರಿಗೆ ಸೇರಿದ ಜಮೀನು ಸೆಕ್ಷನ್ 4ರ ಅಡಿ ಅರಣ್ಯ ಇಲಾಖೆಗೆ ಸೇರಿದ್ದರೆ ದಾಖಲಾತಿಗಳನ್ನು ಸಲ್ಲಿಸಬೇಕು. ಆದರೆ ಅಧಿಕಾರಿಗಳು ನಮ್ಮ ಮೇಲೆ ದರ್ಪ ಮೆರೆದಿದ್ದಾರೆ. ಸಕಲೇಶಪುರ ತಹಶೀಲ್ದಾರ್ ಸಹ ಕಾನೂನು ಗಾಳಿಗೆ ತೂರಿ ಕೆಲಸ ಮಾಡುತ್ತಿದ್ದಾರೆ. ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ಅವರು ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿ ಅರಣ್ಯ ಇಲಾಖೆಯ ನೌಕರರು ಹಾಗೂ ತಹಶೀಲ್ದಾರ್‌ವಿರುದ್ಧ ಕ್ರಮ ಜರುಗಿಸಬೇಕೆಂದು ಆಗ್ರಹಿಸಿದರು.

ಗ್ರಾಮದ ದಿನೇಶ್, ದರ್ಶನ್, ಅಣ್ಣಪ್ಪ ಪೂಜಾರಿ ಹಾಜರಿದ್ದರು.

# ಮಕ್ಕಳಿಗೆ ವಿದ್ಯೆ ಜೊತೆಗೆ ವಿನಯ ಕಲಿಕೆಯಾಗಲಿ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ಪದವಿ ಶಿಕ್ಷಣದ ಜೊತೆಯಲ್ಲಿ ಯಾವುದಾದರೂ ಒಂದು ವೃತ್ತಿಯನ್ನು ಕಲಿಯುವುದರಿಂದ ನಿರುದ್ಯೋಗ ಸಮಸ್ಯೆ ನಿವಾರಣೆಯಾಗುತ್ತದೆ. ವಿದ್ಯಾರ್ಥಿಗಳು ಅಂಕ ಗಳಿಕೆಗಾಗಿ ವ್ಯಾಸಂಗ ಮಾಡದೆ ವಿನಯ, ಸಂಸ್ಕಾರ ಹಾಗೂ ಸದಾಚಾರಗಳನ್ನು ಕಲಿಯಬೇಕೆಂದು ಕನ್ನಡ ಸಾಹಿತ್ಯ ಪರಿಷತ್ ಹೋಬಳಿ ಘಟಕದ ಅಧ್ಯಕ್ಷ ಹೆಚ್.ಎ. ಪ್ರಮೋದ್ ಹೇಳಿದರು.

ತಾಲ್ಲೂಕಿನ ಹಿರೀಸಾವೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಅಂತಿಮ ಪದವಿ ವಿದ್ಯಾರ್ಥಿಗಳಿಗಾಗಿ ಏರ್ಪಡಿಸಿದ್ದ ಬೀಳ್ಕೊಡುಗೆ ಸಮಾರಂಭದಲ್ಲಿ ಮಾತನಾಡಿದ ಅವರು, ದಿನದಿಂದ ದಿನಕ್ಕೆ ತಂತ್ರಜ್ಞಾನದ ಬಳಕೆ ಹೆಚ್ಚುತ್ತಿದೆ. ಅದರಿಂದ ನಿರುದ್ಯೋಗ ಸಮಸ್ಯೆ ಕಾಡುತ್ತಿದೆ. ಕೈಯಲ್ಲಿ ಒಂದು ವೃತ್ತಿ ಇದ್ದು, ಆ ಕೆಲಸವನ್ನು ಏಕಾಗ್ರತೆ, ಶ್ರಮದಿಂದ ಮಾಡಿದಾಗ ಯಶಸ್ಸು ಸಿಗುತ್ತದೆ. ನಿಮ್ಮ ಪೋಷಕರು ಮತ್ತು ಶಿಕ್ಷಣ ಪಡೆದ ಸಂಸ್ಥೆ, ಗುರುಗಳನ್ನು ಗೌರವಿಸಿ ಎಂದರು.

ಅಧ್ಯಕ್ಷತೆ ವಹಿಸಿದ್ದ ಪ್ರಾಂಶುಪಾಲ ಬಿ.ಹೆಚ್.ಲಕ್ಷ್ಮಣಗೌಡ ಮಾತನಾಡಿ, ಪದವಿ ಮುಗಿಸಿದ ನಂತರ ಜೀವನದ ನಿಜವಾದ ಸವಾಲುಗಳು ಪ್ರಾರಂಭವಾಗುತ್ತದೆ. ಎಲ್ಲಾ ಕ್ಷಣದಲ್ಲಿ ಉತ್ತಮವಾದದನ್ನು ಯೋಚನೆ ಮಾಡಬೇಕು. ಓದುವುದನ್ನು ನಿಲ್ಲಿಸದೆ, ಉನ್ನತ ಶಿಕ್ಷಣದ ಪದವಿ ಗಳಿಸಿ, ಕಲಿತ ವಿದ್ಯತೆಯಿಂದ ಸಮಾಜದಲ್ಲಿ ಮಾನವೀಯ ಮೌಲ್ಯಗಳೊಂದಿಗೆ ಒಳ್ಳೆಯ ವ್ಯಕ್ತಿಯಾಗಿ ಬದುಕಬೇಕೆಂದು ಸಲಹೆ ನೀಡಿದರು.

ಪ್ರೊ. ಎಂ.ಕೆ. ಮಂಜುನಾಥ್ ಮಾತನಾಡಿ, ಪ್ರತಿ ಕ್ಷೇತ್ರವೂ ಸ್ಪರ್ಧಾತ್ಮಕವಾಗಿದೆ. ಪದವಿ ಪರೀಕ್ಷೆಯಲ್ಲಿ ಪಡೆದ ಅಂಕಗಳಿಂದ ಉದ್ಯೋಗ ಸಿಗುವುದು ಕಷ್ಟ. ನಿಮ್ಮಲ್ಲಿರುವ ಬುದ್ಧಿವಂತಿಕೆ, ಕೌಶಲ, ಸಾಮಾನ್ಯ ಜ್ಞಾನದಿಂದ ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಹೆಚ್ಚಿನ ಅಂಕ ಪಡೆದು ಒಳ್ಳೆಯ ಉದ್ಯೋಗ ಗಿಟ್ಟಿಸಿಕೊಳ್ಳಬಹುದು. ಈಗಾಗಲೇ ಲಕ್ಷಾಂತರ ಪದವಿಧರರು ಸರ್ಕಾರದಲ್ಲಿನ ಖಾಲಿ ಹುದ್ದೆಗಳನ್ನು ಭರ್ತಿ ಮಾಡುವಂತೆ ಪ್ರತಿಭಟನೆ ನಡೆಸುತ್ತಿದ್ದಾರೆ. ಉದ್ಯೋಗ ಸಮಸ್ಯೆ ಹೆಚ್ಚಾಗಿದೆ. ಎಲ್ಲರಿಗೂ ಸರ್ಕಾರಿ ಕೆಲಸ ಸಿಗಲು ಸಾಧ್ಯವಿಲ್ಲ. ಖಾಸಗಿ ಉದ್ಯೋಗ ಮಾಡಲು ತಾವು ಸಿದ್ಧರಗಬೇಕೆಂದು ಕಿವಿಮಾತು ಹೇಳಿದರು.

ಉಪನ್ಯಾಸಕರಾದ ಕುಮಾರ್, ಆಶಾ, ಹರೀಶ್, ಸುನಂದಾ, ಮಹಾಲಕ್ಷ್ಮಿ, ದ್ರಾಕ್ಷಾಯಿಣಿ, ಸತೀಶ್, ಕುಮಾರ್, ಮನು ಇತರರಿದ್ದರು.

# ಇತಿಹಾಸದಲ್ಲಿ ಈ ದಿನ

## ಮೇ-23

1618: ಪ್ರಾಗ್‌ನ ಡಿಫೆನೆಸ್ಟ್ರೇಶನ್ ಆಫ್ ಪ್ರಾಗ್ ಘಟನೆ ನಡೆದಿದ್ದು, ಇದು ನಂತರದ ಮೂವತ್ತು ವರ್ಷದ ಯುದ್ಧಕ್ಕೆ ನಾಂದಿ ಹಾಡಿತು.

1706: ಸ್ಪ್ಯಾನಿಷ್ ಉತ್ತರಾಧಿಕಾರ ಯುದ್ಧದ ವೇಳೆ ರಾಮಿಲೀಸ್ ಕದನದಲ್ಲಿ ಮಿತ್ರಪಡೆಗಳು ಫ್ರೆಂಚ್ ಸೇನೆಯನ್ನು ಸೋಲಿಸಿದವು.

1915: ಇಟಲಿ, ಆಸ್ಟ್ರಿಯಾಹಂಗೇರಿಯ ವಿರುದ್ಧ ಯುದ್ಧ ಘೋಷಿಸಿ ಪ್ರಥಮ ವಿಶ್ವಯುದ್ಧದಲ್ಲಿ ಮಿತ್ರರಾಷ್ಟ್ರಗಳ ಪರವಾಗಿ ಸೇರಿತು.

1951: ಚೀನಾ ಟಿಬೆಟ್ ಅನ್ನು ಅಧಿಕೃತವಾಗಿ ತನ್ನ ಆಡಳಿತದ ಭಾಗವನ್ನಾಗಿ ಘೋಷಿಸಿತು.

1980: ಸ್ಟ್ಯಾನ್ಲಿ ಕುಬ್ರಿಕ್ ನಿರ್ದೇಶನದ ಪ್ರಸಿದ್ಧ ಭಯಾನಕ ಚಿತ್ರ ದಿ ಶೈನಿಂಗ್ ಬಿಡುಗಡೆಯಾಯಿತು.

2000: ಅಮೆರಿಕನ್ ರ್‍ಯಾಪರ್ ಎಮಿನೆಮ್ ಅವರ **The Marshall Mathers LP** ಆಲ್ಬಮ್ ಬಿಡುಗಡೆಯಾಯಿತು.

### ಜನನ

1707: ಸಸ್ಯಗಳ ವೈಜ್ಞಾನಿಕ ವರ್ಗೀಕರಣ ಪದ್ಧತಿಯ ಪಿತಾಮಹ ಕಾರ್ಲ್ ಲಿನ್ನಿಯಸ್

### ನಿಧನ

2015: ಗಣಿತಜ್ಞ ಹಾಗೂ ನೊಬೆಲ್ ಪ್ರಶಸ್ತಿ ವಿಜೇತ ಜಾನ್ ನಾಶಾ


# ಬಿಳಿಸುಳಿ ರೋಗದಿಂದ ನಷ್ಟ: ಪರಿಹಾರಕ್ಕೆ ಸಂಸದರ ಆಗ್ರಹ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಸಂಸದ ಶ್ರೇಯಸ್ ಎಂ.ಪಟೇಲ್ ಅವರು ಶುಕ್ರವಾರ ಕೇಂದ್ರ ಕೃಷಿ ಹಾಗೂ ಗ್ರಾಮಾಣಾಭಿವೃದ್ಧಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಅವರನ್ನು ಭೇಟಿ ಮಾಡಿ ಜಿಲ್ಲೆಯಲ್ಲಿ ಬಿಳಿ ಸುಳಿ ರೋಗದಿಂದ ತೀವ್ರ ನಷ್ಟ ಅನುಭವಿಸಿರುವ ಮುಸುಕಿನ ಜೋಳ ಬೆಳೆದ ರೈತರಿಗೆ ವಿಶೇಷ ನೆರವು ನೀಡುವಂತೆ ಮನವಿ ಮಾಡಿದರು.

ಹಾಗೆಯೇ ಜಿಲ್ಲೆಯ ರೈತರಿಗೆ ಆರ್ಥಿಕವಾಗಿ ಹೊರೆಯಾಗಿರುವ ಎನ್. ಪಿ.ಕೆ ಹಾಗೂ ಕಾಂಪ್ಲೆಕ್ಸ್ ರಸಗೊಬ್ಬರ ಬೆಲೆಯನ್ನು ಇಳಿಕೆ ಮಾಡುವಂತೆ ಇದೇ ವೇಳೆ ಸಚಿವರಲ್ಲಿ ವಿನಂತಿಸಿದರು.

ಜಿಲ್ಲೆಯ ವಿವಿಧೆಡೆ ಮುಸುಕಿನ ಜೋಳಕ್ಕೆ ವ್ಯಾಪಕವಾಗಿ ವ್ಯಾಪಕವಾಗಿ ಬಿಳಿಸುಳಿ ರೋಗ ಕಾಣಿಸಿಕೊಂಡಿದ್ದರಿಂದ ಬಿತ್ತಿದ ಬೆಳೆ ಹಾಗೆಯೇ ಒಣಗಿ ಹೋಗಿ ಸಾವಿರಾರು ರೈತರು ಭಾರೀ ಆರ್ಥಿಕ ಸಂಕಷ್ಟಕ್ಕೆ ಒಳಗಾಗಿದ್ದಾರೆ ಎಂದು ಮನವರಿಕೆ ಮಾಡಿದರು. ಪ್ರಸ್ತುತ ರಾಜ್ಯ ಸರ್ಕಾರದ ಬೀಜ ವಿತರಣಾ ಯೋಜನೆಯಡಿ ಜೋಳದ ಬಿತ್ತನೆ ಬೀಜಗಳಿಗೆ ಪ್ರತಿ ಕೆ.ಜಿ.ಗೆ 20 ರೂ.ಸಹಾಯಧನ ನೀಡಲಾಗುತ್ತಿದೆ. ಆದರೆ ಬೆಳೆ ನಷ್ಟದಿಂದ ಸಂಕಷ್ಟದಲ್ಲಿರುವ ರೈತರಿಗೆ ಇದು ಸಾಕಾಗುವುದಿಲ್ಲ ಎಂದು ಉಲ್ಲೇಖಿಸಿ, ಹೆಚ್ಚುವರಿ 50 ರೂ. ಸಹಾಯಧನವನ್ನು ವಿಶೇಷ ನೆರವಿನ ರೂಪದಲ್ಲಿ ನೀಡುವಂತೆ ಮನವಿ ಮಾಡಿದರು.



ಅದೇ ರೀತಿ ಸಸ್ಯ ಸಂರಕ್ಷಣಾ ಯೋಜನೆಯಡಿ ಸಸ್ಯ ಸಂರಕ್ಷಣಾ ರಾಸಾಯನಿಕಗಳಿಗೆ ನೀಡಲಾಗುತ್ತಿರುವ ಶೇ.50 ರಷ್ಟು ಸಹಾಯಧನವನ್ನು ಹೆಚ್ಚಿಸಿ, ರೈತರಿಗೆ ಇನ್ನಷ್ಟು ಆರ್ಥಿಕ ನೆರವು ನೀಡಬೇಕು. ಮುಂಗಾರು ಹಂಗಾಮಿನಲ್ಲಿ ಹಾಸನ ಜಿಲ್ಲೆಯ ರೈತರಿಗೆ ಸುಮಾರು 1,64,187 ಮೆಟ್ರಿಕ್ ಟನ್ ರಸಗೊಬ್ಬರದ ಅವಶ್ಯಕತೆ ಇದ್ದು, ಅದರಲ್ಲಿ ಸುಮಾರು 75,137 ಮೆಟ್ರಿಕ್ ಟನ್ ಎನ್‌ಪಿಕೆ ಮತ್ತು ಕಾಂಪ್ಲೆಕ್ಸ್ ರಸಗೊಬ್ಬರವನ್ನು ರೈತರು ಬಳಕೆ ಮಾಡುತ್ತಿದ್ದಾರೆ.

ವಿವಿಧ ಕಂಪನಿಗಳ ಎನ್‌ಪಿಕೆ ಹಾಗೂ ಕಾಂಪ್ಲೆಕ್ಸ್ ರಸಗೊಬ್ಬರಗಳ ಬೆಲೆ ಪ್ರತಿ ಚೀಲಕ್ಕೆ 250 ರಿಂದ 300 ರವರೆಗೆ ಏರಿಕೆಯಾಗಿದ್ದು, ಇದರಿಂದ ರೈತರ ಬೆಳೆಗಳ ಉತ್ಪಾದನಾ ವೆಚ್ಚ ಹೆಚ್ಚಾಗಿ ಆರ್ಥಿಕ ಸಂಕಷ್ಟ ಉಂಟಾಗಿದೆ ಎಂದು ಸಚಿವರ ಗಮನಕ್ಕೆ ತಂದರು.

ಜಿಲ್ಲೆಯ ಗ್ರಾಮ ಪಂಚಾಯಿತಿಗಳಿಗೆ 15ನೇ ಹಣಕಾಸು ಆಯೋಗದಿಂದ ಬಾಕಿ ಇರುವ 94.98 ಕೋಟಿ ಅನುದಾನವನ್ನು ತುರ್ತಾಗಿ ಬಿಡುಗಡೆ ಮಾಡುವಂತೆ ಆಗ್ರಹಿಸಿದರು.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248